ವಿಜಯಪುರ | ಸಂಪುಟ 01 | ಸಂಚಿಕೆ 271 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಶುಕ್ರವಾರ ಡಿಸೆಂಬರ್ 22, 2023



“ವಿಜಯಪುರ ನಗರದ ಹೊರವಲಯದ ಭೂತನಾಳ ಗ್ರಾಮದ ಹತ್ತಿರ ನಿರ್ಮಾಣವಾಗುತ್ತಿರುವ ಸೈಕ್ಲಿಂಗ್ ವೆಲೋಡ್ರೋಂ ಕಾಮಗಾರಿಯನ್ನು ಗುತ್ತಿಗೆದಾರರು ಇದೇ ಜ.15ರೊಳಗೆ ಪೂರ್ಣಗೊಳಿಸಬೇಕು.

– ರಾಹುಲ್ ಶಿಂಧೆ
ಜಿಪಂ ಸಿಇಓ ವಿಜಯಪುರ

### ಕೊರೋನಾ ಸಕ್ರಿಯ ಪ್ರಕರಣಗಳು 105ಕ್ಕೆ ಏರಿಕೆ । ಆಕ್ಸಿಜನ್–ವೆಂಟಿಲೇಟರ್‌ಗೆ ಕೊರತೆಯಾಗದಂತೆ ಕ್ರಮ

# ಸಿಎಂ ನೇತೃತ್ವದಲ್ಲಿ ಕೋವಿಡ್ ತಜ್ಞರ ಸಭೆ

ಬೆಂಗಳೂರು: ರಾಜ್ಯದಲ್ಲಿ ಕೋವಿಡ್19 ಪ್ರಕರಣಗಳು ಮತ್ತೆ ಹೆಚ್ಚಳವಾಗುತ್ತಿರುವ ಹಾಗೂ ಬೆಂಗಳೂರಿನಲ್ಲಿ ಕೋವಿಡ್‌ನಿಂದಾಗಿ ಕಳೆದ ಮೂರು ದಿನಗಳಲ್ಲಿ ಮೂವರು ಮೃತಪಟ್ಟಿರುವ ಹಿನ್ನೆಲೆಯಲ್ಲಿ ರಾಜ್ಯದ ಸ್ಥಿತಿಗತಿಯ ಕುರಿತು ಚರ್ಚಿಸಲು ಹಾಗೂ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಚರ್ಚಿಸಲು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಚರ್ಚೆ ನಡೆಸಲಾಯಿತು.



ರಾಜ್ಯದಲ್ಲಿರುವ ಒಟ್ಟು 92 ಸಕ್ರಿಯ ಪ್ರಕರಣಗಳಲ್ಲಿ 80 ಬೆಂಗಳೂರು ನಗರದಲ್ಲಿ ಇದೆ. ಉಳಿದಂತೆ ಮೈಸೂ–ರಿನಲ್ಲಿ 5, ಬಳ್ಳಾರಿಯಲ್ಲಿ 3, ರಾಮನಗರ ಹಾಗೂ ಮಂಡ್ಯದಲ್ಲಿ ತಲಾ 1 ಪ್ರಕರಣ ವರದಿಯಾಗಿದೆ. ಇವರಲ್ಲಿ 72 ಜನ ಮನೆಯಲ್ಲಿಯೇ ಪ್ರತ್ಯೇಕವಾಗಿದ್ದಾರೆ. 20 ಜನ ಆಸ್ಪತ್ರೆಗೆ ದಾಖಲಾಗಿದ್ದಾರೆ. ಏಳು ಜನರು ಐಸಿಯುನಲ್ಲಿದ್ದು, ಇವರೆಲ್ಲರೂ ಇತರ ಸಮಸ್ಯೆಗಳಿಂದಲೂ ಬಳಲುತ್ತಿದ್ದಾರೆ. ಅದಾಗ್ಯೂ ಜನರು ಆತಂಕ ಪಡುವ ಅಗತ್ಯವಿಲ್ಲ. ಆದರೆ ಮುನ್ನೆಚ್ಚರಿಕೆ ಕ್ರಮಗಳನ್ನು ಅಗತ್ಯವಾಗಿ ಕೈಗೊಳ್ಳಬೇಕಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ತಾಂತ್ರಿಕ ಸಲಹಾ ಸಮಿತಿ ನೀಡಿರುವ ಸಲಹೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಆಕ್ಸಿಜನ್, ವೆಂಟಿಲೇಟರ್, ಬೆಡ್‌ಗಳು ಯಾವುದಕ್ಕೂ ತೊಂದರೆ ಆಗಬಾರದು. ಆಕ್ಸಿಜನ್ ಲಭ್ಯತೆ ಖಾತ್ರಿಗೊಳಿಸಬೇಕು. ಇದಕ್ಕೆ ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗಳು ಸನ್ನದ್ಧವಾಗಿ ಯಾವುದೂ ಕೊರತೆಯಾಗದಂತೆ ನೋಡಿಕೊಳ್ಳಬೇಕು. ತಾಂತ್ರಿಕ ಸಲಹಾ ಸಮಿತಿಯ ಸಲಹೆಗಳನ್ನು ಪಾಲಿಸಬೇಕು. ಎಲ್ಲರೂ ಜವಾಬ್ದಾರಿ ಅರಿತು ಕೆಲಸ ಮಾಡಬೇಕು ಎಂದರು.

## ಗುರುವಾರ 24 ಜನರಿಗೆ ಕೊರೋನಾ ಪಾಸಿಟಿವ್

ಬೆಂಗಳೂರು: ದೇಶದಲ್ಲಿ ಕೋವಿಡ್ ಉಪತಳಿ ಜೆಎನ್ 1 ಪ್ರಕರಣ ಪತ್ತೆಯಾಗಿದ್ದು, ಮತ್ತೆ ಕೊರೋನಾ ಆಂತಕ ಶುರುವಾಗಿದೆ. ರಾಜ್ಯದಲ್ಲಿ ಗುರುವಾರ 24 ಜನರಿಗೆ ಕೊರೋನಾ ಪಾಸಿಟಿವ್ ದೃಢಪಟ್ಟಿದ್ದು, ಸಕ್ರಿಯ ಪ್ರಕರಣಗಳ ಸಂಖ್ಯೆ105ಕ್ಕೆ ಏರಿಕೆಯಾಗಿದೆ.

ಕಳೆದ 24 ಗಂಟೆಗಳಲ್ಲಿ 24 ಹೊಸ ಕೋವಿಡ್–19 ಪಾಸಿಟಿವ್ ಪ್ರಕರಣಗಳು ವರದಿಯಾಗಿವೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

1,791 ಖಖಿ–ಕಅಖ ಸೇರಿದಂತೆ ಒಟ್ಟು 2,263 ಮಂದಿಗೆ ಕೋವಿಡ್ ಪರೀಕ್ಷೆ ನಡೆಸಲಾಗಿದ್ದು, ಈ ಪೈಕಿ 24 ಮಂದಿಗೆ ಪಾಸಿಟಿವ್ ಬಂದಿದೆ. ಬೆಂಗಳೂರು ನಗರ ಜಿಲ್ಲೆಯಲ್ಲಿಯೇ 23 ಪ್ರಕರಣಗಳು ವರದಿಯಾಗಿದ್ದು, ನಗರದಲ್ಲಿ 93 ಸಕ್ರಿಯ ಪ್ರಕರಣಗಳಿವೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಕೇರಳದ ಗಡಿಯಲ್ಲಿರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ಪ್ರಕರಣ ವರದಿಯಾಗಿದೆ.

ಗುರುವಾರ ಆಸ್ಪತ್ರೆಯಿಂದ 11 ಮಂದಿ ಡಿಸ್ಚಾರ್ಜ್ ಆಗಿದ್ದು, ರಾಜ್ಯದಲ್ಲಿ ಒಟ್ಟು 105 ಸಕ್ರಿಯ ಕೊರೋನಾ ಕೇಸ್‌ಗಳಿನೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.

105 ಪ್ರಕರಣಗಳಲ್ಲಿ, 85 ಜನರು ಮನೆಯಲ್ಲಿ ಕ್ವಾರಂಟೈನ್ ಆಗಿದ್ದಾರೆ ಮತ್ತು 20 ಜನ ಆಸ್ಪತ್ರೆಗೆ ದಾಖಲಾಗಿದ್ದಾರೆ. ಆಸ್ಪತ್ರೆಗೆ ದಾಖಲಾದ 20 ಮಂದಿಯಲ್ಲಿ ಒಂಬತ್ತು ಮಂದಿ ಐಸಿಯುನಲ್ಲಿದ್ದಾರೆ.

## ರಾಜ ನುಡಿ

ಬೇಡವೆಂದು ಬಹಿರಂಗವಾಗಿ ಬಿಟ್ಟು ಹೋದವರನ್ನು, ಅಂತರಂಗದಲ್ಲಿ ಮೂರ್ತಿಯಂತೆ ಪ್ರತಿಷ್ಠಾಪಿಸಿಕೊಂಡು ಜೀವನವಿಡಿ ಕೊರಗುವವರೇ ಹೆಚ್ಚು. ನಮ್ಮಂತರಾಳದಲ್ಲಿ ಪೂಜನೀಯವಾದವರನ್ನು ಬಿಟ್ಟು ಮಿಕ್ಕ ಎಲ್ಲರನ್ನೂ ಸ್ವತಂತ್ರಗೊಳಿಸಿ ಬಿಡುಗಡೆ ಮಾಡದ ಹೊರತು ಕೊರಗುವಿಕೆಯಿಂದ ಮುಕ್ತಿ ಎಲ್ಲೀ!!.

–ಡಾ. ರಾಜಶೇಖರ ನಾಗೂರ

### ನಮ್ಮ ನೆರೆ ದೇಶ ಚಂದ್ರನನ್ನು ತಲುಪಿದೆ, ಆದರೆ ಪಾಕ್ ಭೂಮಿಯಿಂದ ಮೇಲೇಳುತ್ತಿಲ್ಲ

# ಭಾರತವನ್ನು ಶ್ಲಾಘಿಸಿದ ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷರೀಫ್

ಉದಯರಶ್ಮಿ ನ್ಯೂಸ್

ಇಸ್ಲಾಮಾಬಾದ್: ನಮ್ಮ ನೆರೆ ದೇಶಗಳು ಚಂದ್ರನನ್ನು ತಲುಪಿವೆ. ಆದರೆ ಪಾಕಿಸ್ತಾನಕ್ಕೆ ಇನ್ನೂ ಭೂಮಿಯಿಂದ 'ಎದ್ದೇಳಲು' ಸಾಧ್ಯವಾಗಿಲ್ಲ ಎಂದು ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷ–ರೀಫ್ ಮತ್ತೊಮ್ಮೆ ಭಾರತವನ್ನು ಹೊಗಳಿದ್ದಾರೆ.



ಇಸ್ಲಾಮಾಬಾದ್‌ನಲ್ಲಿ ಪಾಕಿಸ್ತಾನ್ ಮುಸ್ಲಿಂ ಲೀಗ್–ನವಾಜ್ (ಪಿಎಂ–ಎಲ್–ಎನ್) ಕೇಡರ್ ಅನ್ನು ಉದ್ದೇಶಿಸಿ ಮಾತನಾಡಿದ ಷರೀಫ್, ದೇಶದ ಭೀಕರ ಆರ್ಥಿಕ ಸ್ಥಿತಿಯನ್ನು ಸೂಚಿಸಿದ ಪಿಎಂಎಲ್–ಎನ್ ಮುಖ್ಯಸ್ಥರು, ಅದರ ಅವನತಿಗೆ ಪಾಕಿಸ್ತಾನವೇ ಕಾರಣ ಎಂದು ಹೇಳಿದರು.

ನಮ್ಮ ನೆರೆಹೊರೆಯವರು ಚಂದ್ರನನ್ನು ತಲುಪಿದ್ದಾರೆ. ಆದರೆ ನಾವು ಇನ್ನೂ ನೆಲದಿಂದ ಮೇಲೇರಲು ಸಹ ಸಾಧ್ಯವಾಗಿಲ್ಲ. ಇದು ಹೀಗೆ ಮುಂದುವರೆಯಲು ಸಾಧ್ಯವಿಲ್ಲ ಎಂದು ಹೇಳಿದರು. ನಮ್ಮ ಅವನತಿಗೆ ನಾವೇ ಕಾರಣ, ಇಲ್ಲದಿದ್ದರೆ ಈ ದೇಶ ಬೇರೆಯದೇ ಸ್ಥಿತಿಗೆ ತಲುಪುತ್ತಿತ್ತು ಎಂದರು.

ನಾಲ್ಕನೇ ಬಾರಿಗೆ ಪಾಕಿಸ್ತಾನದ ಪ್ರಧಾನಿ ಹುದ್ದೆಗೆ ಸ್ಪರ್ಧಿಸುತ್ತಿರುವ ನವಾಜ್ ಷರೀಫ್ ಇಂದು ತಮ್ಮ ಭಾಷಣದಲ್ಲಿ, 2013ರಲ್ಲಿ ನಾವು ಭಾರಿ ವಿದ್ಯುತ್ ಕಡಿತವನ್ನು ಎದುರಿಸಿದ್ದೇವು. ನಾನು ಬಂದು ಅದನ್ನು ಕೊನೆಗೊಳಿಸಿದ್ದೇ, ಇಡೀ ದೇಶದಿಂದ ಭಯೋತ್ಪಾದನೆಯನ್ನು ಕೊನೆಗೊಳಿಸಿದ್ದೇ, ಕರಾಚಿಯಲ್ಲಿ ಶಾಂತಿಯನ್ನು ಪುನಃಸ್ಥಾಪಿಸಿದ್ದೇವು, ಹೆದ್ದಾರಿಗಳನ್ನು ನಿರ್ಮಿಸಿದ್ದೇವು, ಅಕಇಅ ಬಂದಿತ್ತು. ಅಭಿವೃದ್ಧಿ ಮತ್ತು ಸಮೃದ್ಧಿಯ ಹೊಸ ಯುಗ ಪ್ರಾರಂಭವಾಯಿತು.

ಮರ್ಯಮ್ ಮತ್ತು ಇತರ ಪಿಎಂಎಲ್–ಎನ್ ನಾಯಕರ ವಿರುದ್ಧ 'ನಕಲಿ ಪ್ರಕರಣಗಳು' ದಾಖಲಾಗಿವೆ ಎಂದು ಷರೀಫ್ ಹೇಳಿದ್ದಾರೆ. ಇಸ್ಲಾಮಾಬಾದ್ ಹೈಕೋರ್ಟ್ ಕೇವಲ ಮೂರು ವಿಚಾರಣೆಗಳಲ್ಲಿ ಎರಡು ಪ್ರಕರಣಗಳಲ್ಲಿ ಶಿಕ್ಷೆಯನ್ನು ರದ್ದುಗೊಳಿಸಿದೆ.

ದೇಶ ಅಭಿವೃದ್ಧಿಯಾಗಬೇಕಾದರೆ ಮಹಿಳೆಯರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಪಾಕಿಸ್ತಾನದ ಜನತೆಗೆ ನವಾಜ್ ಷರೀಫ್ ಕರೆ ನೀಡಿದ್ದಾರೆ. ಅಭಿವೃದ್ಧಿ ಹೊಂದಿದ ಪ್ರತಿಯೊಂದು ದೇಶವು ಅಭಿವೃದ್ಧಿಯಲ್ಲಿ ಮಹಿಳೆಯರಿಗೆ ಆದ್ಯತೆ ನೀಡಿದೆ. ಅದು ಮಹಿಳೆಯರನ್ನು ಅಭಿವೃದ್ಧಿಗೆ ಮುಂದಕ್ಕೆ ತಂದಿದೆ. ಅಭಿವೃದ್ಧಿಯಲ್ಲಿ ಮಹಿಳೆಯರು ಸಮಾನ ಪಾಲುದಾರರಾಗಬೇಕು ಎಂದು ನಾನು ಭಾವಿಸುತ್ತೇನೆ. ಪುರುಷರೊಂದಿಗೆ ಮಹಿಳೆಗೆ ಸಮಾನ ಹಕ್ಕುಗಳನ್ನು ನೀಡಬೇಕು. ನಾವು ಮಾಡಬೇಕು. ಮುಂದುವರಿಯಿರಿ ಮತ್ತು ಈ ದೇಶಕ್ಕೆ ಸೇವೆ ಸಲ್ಲಿಸಿ ಎಂದು ಹೇಳಿದರು.

### ವಿಜಯಪುರ ಸಹಕಾರಿ ಸಂಘಗಳ ಉಪನಿಬಂಧಕರ ಲಿಖಿತ ಭರವಸೆ

# ದಲಿತಪರ ಸಂಘಟನೆಗಳ ಧರಣಿ ಅಂತ್ಯ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಇಲ್ಲಿನ ಪಿಎಲ್‌ಡಿ ಬ್ಯಾಂಕ್ ನಲ್ಲಿ ಸಾಕಷ್ಟು ಅವ್ಯವಹಾರಗಳು ನಡೆದಿವೆ. ಬ್ಯಾಂಕಿನ ಅಧ್ಯಕ್ಷ ಮತ್ತು ಹಿರಿಯ ಅಧಿಕಾರಿಗಳ ದುರ್ನಡತೆ ಎಂದು ಆರೋಪಿಸಿ ಮತ್ತು ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ವಿವಿಧ ದಲಿತಪರ ಸಂಘಟನೆಗಳ ವತಿಯಿಂದ ಬ್ಯಾಂಕ್ ಎದುರು ಕಳೆದ ನಾಲ್ಕು ದಿನಗಳಿಂದ ನಡೆಸುತ್ತಿದ್ದ ಧರಣಿ ವಿಜಯಪುರದ ಸಹಕಾರಿ ಸಂಘಗಳ ಉಪನಿಬಂಧಕರ ಲಿಖಿತ ಭರವಸೆಯ ಮೇರೆಗೆ ಗುರುವಾರ ತಾತ್ಕಾಲಿಕ ಅಂತ್ಯ ಕಂಡಿದೆ.




ಸೋಮುವಾರದಿಂದ ಶುರುವಾದ ಧರಣಿ ಸ್ಥಳಕ್ಕೆ ಬ್ಯಾಂಕ್‌ನ ಅಧ್ಯಕ್ಷ, ಸ್ಥಳೀಯ ಅಧಿಕಾರಿಗಳು ಧರಣಿ ನಿರತರ ಮನವೊಲಿಸಲು ಸಕಷ್ಟು ಪ್ರಯತ್ನಿಸಿದರೂ ಧರಣಿ ನಿರತರು ತಮ್ಮ ಪಟ್ಟು ಬಿಡದೇ ಹೋರಾಟವನ್ನು ಹಂತ ಹಂತವಾಗಿ ಉಗ್ರವಾಗಿಸಿದ್ದರು. ಗುರುವಾರ ಬೆಳಿಗ್ಗೆ ಬ್ಯಾಂಕ್ ಎದುರಿನ ರಸ್ತೆಯಿಂದ ಆವರಣದಲ್ಲೆಲ್ಲ ಉರುಳುವ ಮೂಲಕ ಪ್ರತಿಭಟಿಸಿ ನಂತರ ತಲೆಯ ಮೇಲೆ ಕಲ್ಲು ಹೊತ್ತು ಧರಣಿ ಮುಂದುವರೆಸಿದ್ದರು. ಧರಣಿ ಸ್ಥಳಕ್ಕೆ ಸಂಜೆ ಆಗಮಿಸಿದ ಅಧಿಕಾರಿ ಭಾಗ್ಯಶ್ರೀ ಎಸ್.ಕೆ ಮತ್ತು ಸಹಾಯಕ ನಿಬಂಧಕ ಚೇತನ ಭಾವಿಕಟ್ಟಿ ಧರಣಿ ನಿರತರ ಬಳಿ ಆರೋಪಿತ ಅವ್ಯವಹಾರಗಳ ಪಟ್ಟಿ ಮಾಡಿಕೊಂಡು ಜನೆವರಿ 20 ರ ಒಳಗಾಗಿ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳುವ ಭರವಸೆಯನ್ನು ಲಿಖಿತವಾಗಿ ನೀಡಿದರು. ಈ ವೇಳೆ ಧರಣಿ ನಿರತರು ಉಳಿದಿರುವ ಎಲ್ಲ ಅಕ್ರಮಗಳನ್ನು ತಮ್ಮ ಅವಧಿಯಂತೇ ಕ್ರಮವಹಿಸಿ ಆದರೆ ಇಲ್ಲಿನ ವಾಣಿಜ್ಯ ಮಳಿಗೆಗಳನ್ನು ಕೂಡಲೇ ಬಂದ್ ಮಾಡಿ ಮತ್ತೊಮ್ಮೆ ಟೆಂಡರ್ ಮಾಡುವಂತೆ ಪಟ್ಟು ಹಿಡಿದರು. ಇದಕ್ಕೊಪ್ಪದ ಅಧಿಕಾರಿಗಳು ತನಿಖೆಗೆ ಅವಶ್ಯಕವಾಗಿ ನಮಗೆ ಕಾಲಾವಕಾಶ ಬೇಕು. ಜ.15 ರ ಒಳಗಾಗಿಯೇ ವಾಣಿಜ್ಯ ಮಳಿಗೆಯ ಸಂಪೂರ್ಣ ಮಾಹಿತಿ ಕಲೆ ಹಾಕಿ ಕ್ರಮ ವಹಿಸುವದಾಗಿ ಮತ್ತೊಮ್ಮೆ ಲಿಖಿತವಾಗಿ ಭರವಸೆ ನೀಡಿದ ನಂತರ ಧರಣಿ ನಿರತರು ತಾತ್ಕಾಲಿಕವಾಗಿ ಹಿಂಪಡೆದರು.

ಈ ವೇಳೆ ಪ್ರಮುಖರಾದ ಹರೀಶ ನಾಟೇಕಾರ ಮತ್ತು ಬಸವರಾಜ ಸಿದ್ದಾಪೂರ ಮಾಧ್ಯಮದವರೊಂದಿಗೆ ಮಾತನಾಡಿ ಅಧಿಕಾರಿಗಳ ಲಿಖಿತ ಭರವಸೆಗೆ ಸಧ್ಯ ಧರಣಿಯನ್ನು ತಾತ್ಕಾಲಿಕವಾಗಿ ಹಿಂದಕ್ಕೆ ಪಡೆಯುತ್ತಿದ್ದೇವೆ. ಜ.15 ರ ಒಳಗಾಗಿ ವಾಣಿಜ್ಯ ಮಳಿಗೆಗಳ ಕುರಿತು ಯಾವುದೇ ಕ್ರಮವಾಗದಿದ್ದರೆ 15ರಂದು ಮತ್ತಷ್ಟು ಉಗ್ರವಾಗಿ ಪ್ರತಿಭಟಿಸುವ ಎಚ್ಚರಿಕೆಯನ್ನು ನೀಡಿದರು.

ಈ ವೇಳೆ ಮುಖಂಡರಾದ ಪರಶುರಾಮ ನಾಲತವಾಡ, ಶರಣು ಸರೂರ, ಗೋಪಾಲ ದಾಸರ, ಸಂಗು ಚಲವಾದಿ ಸೇರಿದಂತೆ ಮತ್ತೀತರರು ಭಾಗಿಯಾಗಿದ್ದರು. ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ, ಕ್ರೈಂ ಪಿಎಸ್‌ಐ ಮನ್ನಾಬಾಯಿ ಸೇರಿದಂತೆ ಪೊಲೀಸ್ ಸಿಬ್ಬಂದಿ ಇದ್ದರು.

## ವಚನ ಚಿಂತನ 261



ಹಸಿಯಡಗನೆ ಹಿಡಿದು ಹಸಿದು ಸತ್ತರು.

*ಆಲಿಕಲ್ಲ ನಡುವೆ ಆರಯ್ಯಾ ಅಗ್ನಿಯನಿರಿಸಿದವರು ?*
*ಅದು ನಂದದೆ ಉರಿಯದೆ ನಿಂದ ಪರಿಯ ನೋಡಾ !*
*ಮನಪವನಗಳ ಅಡುಗಬ್ಬನಿಕ್ಕಿ,*
*ಅಗ್ನಿಯ ಪಟುಮಾಡಬಲ್ಲವರನೊಬ್ಬರನೂ ಕಾಣೆ !*
*ಹಸಿಯಡಗನೆ ಹಿಡಿದು ಹಸಿದು ಸತ್ತರು.*
*ಗುಹೇಶ್ವರಲಿಂಗದಲ್ಲಿ ಪ್ರಾಣಲಿಂಗಿಗಳಪೂರ್ವ !*
*– ಅಲ್ಲಮಪ್ರಭುಗಳು*

ಇಲ್ಲಿ ಆಲಿಕಲ್ಲು ಎಂದರೆ ಕೆಲವು ದಿನಗಳ ನಂತರ ಕರಗಿಹೋಗುವ ಮಾನವನ ದೇಹ ಅದರ ನಡುವೆ ಇರಿಸಿದ ಅಗ್ನಿ ಎಂದರೆ ಉಸಿರು ಅಥವಾ ಪ್ರಾಣ/ಜೀವ. ಈ ಪ್ರಾಣಶಕ್ತಿಯನ್ನು ಅರಿಯದೆ ಅದರ ಉಪಯೋಗವನ್ನು ಮಾಡಿಕೊಳ್ಳದೆ ಹಾಗೆ ಜೀವಿಸಿ ಸಾಯುವವರನ್ನು ಕುರಿತು ಅಲ್ಲಮರು ಈ ವಚನದಲ್ಲಿ ಮರುಗಿದ್ದಾರೆ. ಮನ ಪವನಗಳು ಅಡುಗೆಗೆ ಬೇಕಾದ ಪದಾರ್ಥಗಳು ಇವುಗಳನ್ನು ದೇಹದಲ್ಲಿ ಮೊದಲೇ ಇರಿಸಲಾಗಿದೆ, ಇವುಗಳು ಬೆಂದು ಆಹಾರವಾಗಬೇಕಾದರೆ ಅವು ಬೆಯಲು ಅಗ್ನಿಯ ಪುಟುವನ್ನು ಇಡಬೇಕು ಆಗ ಮಾತ್ರ ಆಹಾರ ತಯಾರಾಗುತ್ತದೆ ಆದರೆ ಇಂದು ಬಹಳಷ್ಟು ಜನ ಈ ಆಹಾರವನ್ನು ಬೇಯಿಸದೆ ಹಸಿಯ ಅಡುಗೆನ್ನೇ ಕೈಯಲ್ಲಿ ಹಿಡಿದು ಉಪವಾಸದಿಂದ ಸತ್ತರು ಎಂದು ತಮ್ಮೊಳಗೆ ಅಡಗಿದ ಮಹಾಲಿಂಗದ ಚೈತನ್ಯವನ್ನು ಅರಿಯದೆ ಮರಣಿಸುವವರ ಕುರಿತು ಅಲ್ಲಮಪ್ರಭುಗಳು ತಿಳಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಡಿ.22 ರಂದು ಭಗವದ್ಗೀತಾ ಜಯಂತಿ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಡಿ.22 ರಂದು ಸಂಜೆ 5ಗಂಟೆಗೆ ಪಟ್ಟಣದ ಬಸವ ನಗರ ವ್ಯಾಪ್ತಿಯ ಬಸವ ಗಾರ್ಡನ್ ನಲ್ಲಿ ಭಗವದ್ಗೀತಾ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಶ್ರೀ ಸರ್ವಜ್ಞೇಂದ್ರ ಸರಸ್ವತೀ ಪ್ರತಿಷ್ಠಾನ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನ ಶಿರಸಿ ಹಾಗೂ ಶ್ರೀ ಭಗವದ್ಗೀತಾ ಅಭಿಯಾನ ತಾಲೂಕಾ ಸಮಿತಿಯ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯುತ್ತಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿ ಕಾರ್ಯಕ್ರಮಕ್ಕೆ ಶೋಭೆ ತರಬೇಕು ಎಂದು ಅಭಿಯಾನದ ಸಂಚಾಲಕರಾದ ರಾಮಚಂದ್ರ ಹೆಗಡೆ ಮನವಿ ಮಾಡಿಕೊಂಡಿದ್ದಾರೆ.

### ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಜಿಪಂ ಸಿಇಓ ರಾಹುಲ್ ಶಿಂಧೆ ಸೂಚನೆ

# ಜ.15ರೊಳಗೆ ಸೈಕ್ಲಿಂಗ್ ವೆಲೊಡ್ರೊಂ ಕಾಮಗಾರಿ ಪೂರ್ಣಗೊಳಿಸಿ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಹೊರವಲಯದ ಭೂತನಾಳ ಗ್ರಾಮದ ಹತ್ತಿರ ನಿರ್ಮಾಣವಾಗುತ್ತಿರುವ ಸೈಕ್ಲಿಂಗ್ ವೆಲೋಡ್ರೋಂ ಕಾಮಗಾ–ರಿಯನ್ನು ಇದೇ ಜನವರಿ 15ರೊಳಗೆ ಪೂರ್ಣಗೊಳಿಸುವಂತೆ ಗುತ್ತಿಗೆದಾರ–ರಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಸೂಚನೆ ನೀಡಿದ್ದಾರೆ.



ಗುರುವಾರ ಸೈಕ್ಲಿಂಗ್ ವೆಲೋಡ್ರೋಂ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸೈಕ್ಲಿಂಗ್ವ ಲೊಡ್ರೊಂ ಕಾಮಗಾರಿಯು ಆರಂಭವಾಗಿ ಬಹಳ ದಿನಗಳಾದರೂ ಕಾಮಗಾರಿ ಪೂರ್ಣಗೊಂಡಿಲ್ಲ. ಇದ–ರಿಂದ ಈ ಭಾಗದ ಸೈಕ್ಲಿಸ್ಟ್ ಗಳಿಗೆ ತೊಂದರೆಯಾಗುತ್ತಿರುವುದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಪ್ರಥಮಾಧ್ಯತೆಯಲ್ಲಿ ಬಾಕಿ ಉಳಿದ ಕಾಮಗಾರಿಯನ್ನು ಕೈಗೊಂಡು ಜನೇವರಿ 15ರೊಳಗಾಗಿ ಪೂರ್ಣಗೊಳಿಸುವಂತೆ ಸೂಚಿಸಿದ ಅವರು, ಕಾಮಗಾರಿಯ ಗುಣಮಟ್ಟದಲ್ಲಿ ಯಾವದೇ ರಾಜಿ ಮಾಡಿಕೊಳ್ಳದೇ ಉತ್ತಮ ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪಿ.ಎಚ್.ಚವ್ಹಾಣ, ಸಹಾಯಕ ಅಭಿಯಂತರ ಎ.ಸಿ.ಮ್ಯಾಗೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಣಕಾಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಡಿ.23ರಂದು ಸ್ನೇಹ ಸಂಗಮ–ಗುರುವಂದನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಬಿ ಎಲ್ ಡಿ ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ ಎಂ ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ 1993ರಲ್ಲಿ ಎಂಬಿಬಿಎಸ್ ಪ್ರವೇಶ ಪಡೆದ ವೈದ್ಯಕೀಯ ವಿದ್ಯಾರ್ಥಿಗಳ 30ನೇ ವರ್ಷದ ಸ್ನೇಹ ಸಂಗಮ (1993–2023) ಮತ್ತು ಗುರುವಂದನೆ ಕಾರ್ಯಕ್ರಮ ಡಿಸೆಂಬರ್ 23 ರಂದು ಶನಿವಾರ ನಡೆಯಲಿದೆ.

ಬಿ.ಎಲ್.ಡಿ.ಇ ಆಸ್ಪತ್ರೆಯ ಹೊಸ ಅಪಘಾತ ಮತ್ತು ತುರ್ತು ಚಿಕಿತ್ಸಾ ವಿಭಾಗ ಕಟ್ಟಡದ ಸಭಾಂಗಣದಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ವಿವಿ ಕುಲಪತಿ ಡಾ. ಆರ್. ಎಸ್. ಮುಧೋಳ, ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ಹಳೆಯ ವಿದ್ಯಾರ್ಥಿಗಳ ಸಂಘದ ಉಪಾಧ್ಯಕ್ಷ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ದೇಶದ ನಾನಾ ಭಾಗಗಳಲ್ಲಿ ಮತ್ತು ವಿದೇಶಗಳಲ್ಲಿ ನೆಲೆಸಿರುವ 1993ನೇ ಬ್ಯಾಚಿನ ಸುಮಾರು 100 ವಿದ್ಯಾರ್ಥಿಗಳು ಪಾಲ್ಗೋಳ್ಳುತ್ತಿದ್ದಾರೆ. ಈ ಸಂದರ್ಭದಲ್ಲಿ ವೈದ್ಯಕೀಯ ವಿದ್ಯಾರ್ಜನೆ ಮಾಡಿಸಿದ ಸುಮಾರು 35 ಜನ ಶಿಕ್ಷಕ–ರಿಗೆ ಗುರುವಂದನೆ ಸಲ್ಲಿಸಲಾಗುವುದು ಎಂದು ಎಂದು 1993ನೇ ಬ್ಯಾಚಿನ ವಿದ್ಯಾರ್ಥಿ ಮತ್ತು ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ ಹಾಗೂ ರಕ್ತ ಭಂಡಾರದ ಮುಖ್ಯಸ್ಥ ಡಾ. ಪ್ರಕಾಶ ಪಾಟೀಲ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.23ರ ರೈತ ಸಮಾವೇಶದಲ್ಲಿ ಪಾಲ್ಗೊಳ್ಳಲು ಕರೆ

**ಉದಯರಶ್ಮಿ ನ್ಯೂಸ್**



ಮೋರಟಗಿ: ರಾಜ್ಯದಲ್ಲಿ ರೈತರು ಒಂದಿಲ್ಲ ಒಂದು ಸಮಸ್ಸೆಗೆ ಸಿಲುಕಿ ಸಾಲದ ಸುಳಿಗೆ ತುತ್ತಾಗುತ್ತಿದ್ದಾರೆ. ಸರ್ಕಾರ ರೈತರ ಸಂಕಷ್ಟಕ್ಕೆ ಸ್ಪಂದಿಸುತಿಲ್ಲ. ರೈತ ಬದುಕಲಾಗದಷ್ಟು ಮಾನಸಿಕವಾಗಿ ಕುಗ್ಗಿದ್ದಾನೆ. ಹೀಗಾಗಿ ರೈತರ ರಾಷ್ಟ್ರೀಕೃತ ಬ್ಯಾಂಕಗಳಲ್ಲಿನ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಇದೇ ತಿಂಗಳು 23 ರಂದು ರೈತ ಸಮಾವೇಶದಲ್ಲಿ ಗ್ರಾಮೀಣ ಭಾಗದಿಂದ ಕೂಡಾ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಪಾಲ್ಗೊಳ್ಳಬೇಕು ಎಂದು ಕಬ್ಬು ಬೆಳೆಗಾರರ ಸಂಘದ ತಾಲೂಕ ಅಧ್ಯಕ್ಷ ಧರೆಪ್ಪ ಗೌಡ ಬಿರಾದಾರ ಕರೆ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಮುಂಗಾರು ಕೈ ಕೊಟ್ಟಿದ್ದರಿಂದ ರೈತ ಸಂಪೂರ್ಣ ಕಂಗಾಲಾಗಿ ಬರಗಾಲದಂತ ಭೀಕರತೆಯಲ್ಲಿ ಮುಳುಗಿದ್ದಾನೆ ಕಳೆದ ಚಳಿಗಾಲ ಅಧಿವೇಶನದಲ್ಲಿ ಸರ್ಕಾರ ರೈತರ ಸಾಲ ಮನ್ನಾ ಮಾಡಬೇಕಿತ್ತು ಈ ಕುರಿತು ಸರಕಾರಕ್ಕೆ ಸಾಕಷ್ಟು ಸಲ ಗಮನಕ್ಕೆ ತಂದರೂ ಪ್ರಯೋಜನೆ ಆಗಿಲ್ಲ. ಹಾಗಾಗಿ ಬೆಂಗಳೂರಲ್ಲಿ ವಿಶ್ವ ರೈತ ದಿನದಂದು ಸಹಸ್ರಾರು ಸಂಖ್ಯೆಯಲ್ಲಿ ರೈತರು ಸೇರಿ ದೊಡ್ಡ ಹೋರಾಟ ಮಾಡುವ ಮೂಲಕ ಸಾಲ ಮನ್ನಾ ಮಾಡುವಂತೆ ಸರಕಾರಗಳ ಮೇಲೆ ಒತ್ತಡ ತರುವ ಕೆಲಸ ಮಾಡಲಾಗುವುದು ಕಾರಣ ಹೆಚ್ಚಿನ ಪ್ರಮಾಣದಲ್ಲಿ ರೈತರು ಬೆಂಗಳೂರು ಸಮಾವೇಶದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದ್ದಾರೆ.

# ಡಿ.25 ರಂದು ವೀರಭದ್ರೇಶ್ವರ ಜಾತ್ರಾ ಮಹೋತ್ಸವ

**ಉದಯರಶ್ಮಿ ನ್ಯೂಸ್**

ಇಂಡಿ: ತಾಲೂಕಿನ ಸಾತಲಗಾಂವ ಪಿಐ ಗ್ರಾಮದ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಡಿ. 25 ಮತ್ತು 26 ರಂದು ವಿವಿಧ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಡಿ. 25 ರಂದು ರಾತ್ರಿ 10:00 ಘಂಟೆಗೆ ಅಗ್ನಿಪುಟವ ಕಾರ್ಯಕ್ರಮ ಹಾಗೂ ಭಜನೆ ಮತ್ತು ಡೊಳ್ಳಿನ ಕಾರ್ಯಕ್ರಮ ಜರುಗುತ್ತದೆ. ತದನಂತರ ಬೆಳಿಗ್ಗೆ ಡಿ.26 ರಂದು ಶ್ರೀ ಬಸವೇಶ್ವರ ದೇವಾಲಯದಿಂದ ಪಲ್ಲಕ್ಕಿ ಮತ್ತು ಪುರವಂದರ ಉತ್ಸವ ಸಕಲ ವಾದ್ಯ ವೈಭವಗಳೋಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯುತ್ತದೆ. ತದನಂತರ ವೀರಭದ್ರೇಶ್ವರ ದೇವಸ್ಥಾನಕ್ಕೆ ತಲುಪಿತನಂದರ ಮಧ್ಯಾಹ್ನ 1 ಗಂಟೆಗೆ ಅಗ್ನಿ ಪ್ರವೇಶ ಕಾರ್ಯಕ್ರಮ ನೆರೆವರೆಯುವುದು. ಅದೇ ದಿನ ರಾತ್ರಿ "ಮಗ ಹೋದರು ಮಾಂಗಲ್ಯ ಬೇಕು" ಎಂಬ ಕೌಟುಂಬಿಕ ಸುಂದರ ಸಾಮಾಜಿಕ ನಾಟಕ ಜರುಗುತ್ತದೆ ಎಂದು ಜಾತ್ರಾ ಕಮೀಟಿಪ್ರಕಟಣೆಯಲ್ಲಿ ತಿಳಿಸಿದೆ.

# ವೃಕ್ಷೊಥಾನ್ ರನ್: ಹಿರಿಯರಲ್ಲೂ ಹೆಚ್ಚುತ್ತಿರುವ ಕ್ರೇಜ್

**ಉದಯರಶ್ಮಿ ನ್ಯೂಸ್**





ವಿಜಯಪುರ: ವೃಕ್ಷೊಥಾನ್ ಹೆರಿಟೇಜ್ ರನ್– 2023 ಕ್ರೇಜ್ ಹೆಚ್ಚಾಗತೊಡಗಿದ್ದು, ದೇಶದ ಮೂಲೆ ಮೂಲೆಗಳಿಂದ ಈಗಲೂ ಕೂಡ ಹಿರಿಯ ನಾಗರಿಕರು ಪಾಲ್ಗೊಳ್ಳುವ ಮೂಲಕ ಗಮನ ಸೆಳೆಯುತ್ತಿದ್ದಾರೆ.

ಪುಣೆಯ 66 ವರ್ಷದ ಶರದ ಚವ್ಹಾಣ ಈಗ ಮ್ಯಾರಾಥಾನ್ ನಲ್ಲಿ ಹಿರಿಯರ ವಿಭಾಗದಲ್ಲಿ ಅವರದೇ ಆದ ಸಾಧನೆಯ ಮೂಲಕ ಹೆಸರು ಮಾಡಿದ್ದಾರೆ. ಸೇವಾ ನಿವೃತ್ತಿಯ ಬಳಿಕ 60ನೇ ವಯಸ್ಸಿಗೆ ಮ್ಯಾರಾಥಾನ್ ಕು–ರಿತು ಆಸಕ್ತಿ ಬೆಳೆಸಿಕೊಂಡಿರುವ ಎಂಬುವರು ಈಗ ಈ ಬಾರಿಯ ವೃಕ್ಷೊಥಾನ್ ಹೆರಿಟೇಜ್ ರನ್–2023ರಲ್ಲಿ ಪಾಲ್ಗೊಳ್ಳುತ್ತಿದ್ದಾರೆ. 2017ರಲ್ಲಿ ಮಹಾರಾಷ್ಟ್ರದ ಸಾತಾರದಲ್ಲಿ ನಡೆದ ಗುಡ್ಡಗಾಡು ಮ್ಯಾರಾಥಾನ್ ನಲ್ಲಿ ಪಾಲ್ಗೊಂಡು ಗಮನ ಸೆಳೆದ ನಂತರ ಇವರು ಈಗ ಹಲವಾರು ಓಟಗಳಲ್ಲಿ ಪಾಲ್ಗೊಂಡಿದ್ದಾರೆ.

ಜಗತ್ತಿನಲ್ಲಿಯೇ ಅತೀ ಹೆಚ್ಚಿನ ಎತ್ತರ ಪ್ರದೇಶಗಳಲ್ಲೊಂದು ಹಾಗೂ ಓಟಗಾರರಿಗೆ ಅತ್ಯಂತ ಕಠಿಣವಾಗಿರುವ ಲಡಾಕ್ ಸೇ–ರಿದಂತೆ ಈವರೆಗೆ ಇವರು 32 ನಾನಾ ಮ್ಯಾರಾಥಾನ್ ಗಳಲ್ಲಿ ಪಾಲ್ಗೋಂಡ ಹಿರಿಯ ಓಟಗಾರ ಎಂದೂ ಹೆಸರು ಮಾಡಿದ್ದಾರೆ. ಟಾಟಾ ಪ್ರೊಕ್ಯಾಮ್ ಆಯೋಜಿಸುವ ಫುಲ್ ಮ್ಯಾರಾಥ–ಾನ್ ಗಳಲ್ಲಿಯೂ ಪಾಲ್ಗೊಂಡಿರುವ ಅವರು, ಬೆಂಗಳೂರು, ದೆಹಲಿ, ಕೊಲ್ಕೊತಾ ಮತ್ತು ಮುಂಬೈಗಳಲ್ಲಿ ನಡೆದ ಮ್ಯಾರಾಥಾನ್ ಗಳಲ್ಲಿ ಭಾಗಿಯಾಗಿದ್ದಾರೆ.

ಕಳೆದ ಸಪ್ಟೆಂಬರ್ ತಿಂಗಳಿನಲ್ಲಿ ಮಹಾರಾಷ್ಟ್ರದ ಕೊಲ್ಹಾಪುರದಲ್ಲಿ ನಡೆದ ಡುಯಾಥ್ಲಾನ್ ನಲ್ಲಿ ಪಾಲ್ಗೋಂಡಿರುವ ಅವರು, ಈ ಕ್ರೀಡೆಯ ಭಾಗವಾಗಿ 10 ಕಿ. ಮೀ. ಓಟ, 40 ಕಿ. ಮೀ. ಸೈಕ್ಲಿಂಗ್ ಮತ್ತು 5 ಕಿ. ಮೀ. ಓಟ ಓಡುವ ಮೂಲಕ ಗಮನ ಸೆಳೆದಿದ್ದಾರೆ. ಅಷ್ಟೇ ಅಲ್ಲ, ಇದೇ ಡಿಸೆಂಬರ್ 3 ರಂದು ಪುಣೆ– ಲೋನಾವಾಲಾ ನಲ್ಲಿ ಐಎಸ್ ಆಯೋಜಿಸಿದ್ದ ಅಥ–್ಲೆಟಿಕ್ಸ್ ನಲ್ಲಿ 100 ಕಿ. ಮೀ. ಸೈಕ್ಲಿಂಗ್ ಪೂರ್ಣಗೊಳಿಸುವ ಮೂಲಕ ಗಮನ ಸೆಳೆದಿದ್ದಾರೆ.

ಈಗ ಇವರು ವಿಜಯಪುರದಲ್ಲಿ ಡಿಸೆಂಬರ್ 24 ರಂದು ರವಿವಾರ ನಡೆಯಲಿರುವ 21 ಕಿ. ಮೀ. ಮ್ಯಾರಾಥಾನ್ ನಲ್ಲಿ ಪಾಲ್ಗೋಳ್ಳುತ್ತಿದ್ದು, ಯುವಕರಿಗೂ ಸ್ಫೂರ್ತಿ ನೀಡಲಿದ್ದಾರೆ.

# ದೇವರಹಿಪ್ಪರಗಿ: ವೀರಭದ್ರೇಶ್ವರ ಕಾರ್ತೀಕೋತ್ಸವ ಸಂಪನ್ನ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ವೀರಭದ್ರೇಶ್ವರ 11ನೇ ವರ್ಷದ ಕಾರ್ತೀಕೋತ್ಸವ ಪುರವಂತರ ಸೇವೆ ಹಾಗೂ ಪಲ್ಲಕ್ಕಿ ಉತ್ಸವದೊಂದಿಗೆ ಸಂಪನ್ನಗೊಂಡಿತು.

ಪಟ್ಟಣದ ವೀರಭದ್ರೇಶ್ವರ ದೇವಸ್ಥಾನದ ಕಾರ್ತೀಕೋತ್ಸವ ಹಾಗೂ ಪ್ರವಚನ ಮಂಗಲದ ಅಂಗವಾಗಿ ಮಂಗಳವಾರ ಬೆಳಿಗ್ಗೆ ಪುರವಂತರ ಸೇವೆ ಹಾಗೂ ಪಲ್ಲಕ್ಕಿ ಉತ್ಸವ ಭಕ್ತ ಸಮೂಹದ ಸಮ್ಮುಖದಲ್ಲಿ ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭಗೊಂಡಿತು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕಲ್ಮೇಶ್ವರ ದೇವಸ್ಥಾನದ ಗಂಗಾಸ್ಥಳ ತಲುಪಿತು. ಪುನಃ ವೀರಭದ್ರೇಶ್ವರ ದೇವಸ್ಥಾನಕ್ಕೆ ಮರಳಿತು. ನಂತರ ಮಹಾಪ್ರಸಾದ ವಿತರಣೆಯಾಯಿತು. ಸಾಯಂಕಾಲ ಭಕ್ತರು ಭಕ್ತಿ, ಭಾವದೊಂದಿಗೆ ದೀಪ ಬೆಳಗಿಸಿ ಕಾರ್ತೀಕೋತ್ಸವ ಆಚ–ರಿಸಿದರು.

ಸ್ಥಳೀಯ ಎಲ್ಲ ಮಠಗಳ ಶ್ರೀಗಳ ಉಪಸ್ಥಿತಿಯಲ್ಲಿ ಜರುಗಿದ ಪ್ರವಚನ ಹಾಗೂ ಮಹಿಳೆಯರಿಂದ ಜರುಗಿದ ತೊಟ್ಟಿಲೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಕಾರ್ತೀಕೋತ್ಸವಕ್ಕೆ ಮೆರಗು ತಂದವು.

ಸಮಿತಿಯ ಸಿ.ಕೆ.ಕುದರಿ, ಪ್ರಭುದೇವ ಹಿರೇಮಠ, ಜಗದೇವಪ್ಪ ಬಿರಾದಾರ, ಯಲಗೂರೇಶ ದೇವೂರ, ಮಡಿವಾಳಪ್ಪ ಮಣೂರ, ರಮೇಶ ಮಶಾನವರ, ರವಿ ಯಾಳಗಿ, ಈರಣ್ಣ ಧುತ್ತರಗಾಂವಿ, ವಿನೋದ ನಾಶಿಮಠ, ಮಡಿವಾಳಯ್ಯ ನಾಶೀಮಠ, ಸಂಗನಗೌಡ ಪಾಟೀಲ, ಬಾಬುಗೌಡ ಪಾಟೀಲ ತೇಜಪ್ಪ ಕಕ್ಕಳಮೇಲಿ, ವೀರಭದ್ರಯ್ಯ ಮಲ್ಲಿಕಾರ್ಜುನಮಠ, ಪ್ರಕಾಶ ವಾಳನೂರ, ಈರಪ್ಪ ಹೊಸಮನಿ, ಪ್ರಸಾದ ಬಡಿಗೇರ, ಪ್ರಕಾಶ ಮಣೂರ, ವೀರಣ್ಣ ಮಣೂರ, ರಾಜು ಮಿರಗಿ, ಶೇಖರ ವಾಡೇದಮನಿ, ತುಕಾರಾಮ ಮಾಳದಕರ, ಅಜ್ಜಯ್ಯ ಹಿರೇಮಠ, ಗುರುಪಾದ ಬುದ್ನಿ, ಶ್ರೀಶೈಲ ಮಣೂರ, ಶ್ರೀಶೈಲ ದೇಸಾಯಿ ಸೇರಿದಂತೆ ಮಹಿಳೆಯರು, ಮಕ್ಕಳು ಇದ್ದರು.

# ನಾಟಕದ ಮೂಲಕ ಗ್ರಾಮೀಣ ಜನರಲ್ಲಿ ಸಂವಿಧಾನದ ಅರಿವು

**ಉದಯರಶ್ಮಿ ನ್ಯೂಸ್**



ಹೊನವಾಡ: ಡಾ.ಬಿ.ಆರ್ ಅಂಬೇಡ್ಕರ ಅವರ ಆಲೋಚನೆಗಳು, ಸಾಮಾಜಿಕ ಅಸಮಾನತೆ, ಲಿಂಗ ತಾರತಮ್ಯ, ರಾಜಕೀಯ, ಆರ್ಥಿಕ ವಿಷಯಗಳ ಬಗ್ಗೆ ಸಂವಿಧಾನದಲ್ಲಿರುವ ಇತರೆ ಪ್ರಮುಖವಾದ ವಿಷಯಗಳ ಮೇಲೆ ಬೆಳಕು ಚೆಲ್ಲುವಂತೆ ಸಂವಿಧಾನದ ಕುರಿತು ನಾಟಕವನ್ನು ಸಿದ್ಧಪಡಿಸಿ ಗ್ರಾಮೀಣ ಪ್ರದೇಶಗಳಲ್ಲಿ ಶಾಲೆಗಳಲ್ಲಿ ಪ್ರದರ್ಶನಗೊಳ್ಳುವ ಮೂಲಕ ಸಂವಿಧಾನದ ಕುರಿತು ಗ್ರಾಮೀಣ ಜನರಲ್ಲಿ ಅರಿವನ್ನು ಮೂಡಿಸುವಲ್ಲಿ ಯಶಸ್ವಿಯಾಗಿದೆ ಎಂದು ಪ್ರಾಚಾರ್ಯ ಎಂ.ಎ ಹಿರೇಮಠ ನುಡಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದಲ್ಲಿ ವಿ ವಿ ಎಸ್ ಪ್ರೌಢ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ವಿಜಯಪುರ ತಾಲ್ಲೂಕು ಪಂಚಾಯತ್ ತಿಕೋಟಾ ಹಾಗೂ ಸಪ್ತಗಿರಿ ಫೌಂಡೇಶನ್ ವಿಜಯಪುರ ವತಿಯಿಂದ ಪ್ರದರ್ಶನ ಮಾಡಲಾಯಿತು.

ಮೊದಮೊದಲಿಗೆ, ಕನ್ನಡದ ಸಾಹಿತಿಗಳ ಪ್ರಖ್ಯಾತ ಕಾದಂಬ–ರಿಗಳ ಕೆಲವು ತುಣುಕುಗಳನ್ನು ಬೀದಿ ನಾಟಕ ರೂಪಕ್ಕೆ ಪರಿವರ್ತಿಸಿ, ಆಯಾ ಸಾಹಿತಿಗಳ ಸಮ್ಮುಖದಲ್ಲಿ, ಪ್ರದರ್ಶನ ನೀಡಿ, ಗೌರವ ಸಮ್ಮಾನ ಮಾಡಿ, ಸಾಹಿತಿಗಳ ಮತ್ತು ಅವರ ಕಾದಂಬರಿಯನ್ನು ಪರಿಚಯಿಸುವ ಕಾರ್ಯಕ್ರಮಗಳಲ್ಲಿ ಬೀದಿ ನಾಟಕ ಬಳಕೆಯಾಗುತಿತ್ತು ಎಂದು ಎಸ್ ಜಿ ಲಕ್ಕುಂಡಿಮಠ ಹೇಳಿದರು.

ಕರ್ನಾಟಕದಲ್ಲಿ ಬೀದಿ ನಾಟಕದ ಪ್ರಕಾರವನ್ನು ಪರಿಚಯಿಸಿದವರು ಹಿರಿಯರಾದ ಎ.ಎಸ್. ಮೂರ್ತಿಯವರು. ನಂತರ ಜನರಲ್ಲಿ ಸಕಾರಾತ್ಮಕ ಭಾವನೆಗೆ ಸಾಮಾಜಿಕ ಚಿಂತನೆಗಳಿಗೆ ಧ್ವನಿಯಾಗಲಿ ಇನ್ನಷ್ಟು ಬೆಳಗಲಿ ಸಾಮಾಜಿಕ ಕಳಕಳಿಯ ಸಾಂಸ್ಕೃತಿಕ ಲೋಕ ಶಕ್ತಿಶಾಲಿಯಾಗಲಿ ಎಂಬ ಆಶಾವಾದ ಮಾತ್ರ ನಮ್ಮನ್ನು ಮುಂದಕ್ಕೆ ಕರೆದೊಯ್ಯಲಿ ಎಂದು ಸಹ ಶಿಕ್ಷಕ ಆಯ್ ಕೆ ನದಾಫ್ ಹೇಳಿದರು.

ಸಪ್ತಗಿರಿ ಫೌಂಡೇಶನ್ ಅಧ್ಯಕ್ಷ ಸುನಿಲ್ ರೆಡ್ಡಿ ಕಾರ್ಯದರ್ಶಿ ಮಲ್ಲಕಾರ್ಜುನ ರೆಡ್ಡಿ ಸಂಚಾಲಕ ಸಂಗಮೇಶ ಕಲಾವಿದರಾದ ಎ ಎನ್ ಹುಲಗೆಪ್ಪ ಬಂಡೆಹಳ್ಳಿ, ಮಮತಮ್ಮ ತುಮಕೂರು ರವಿಕುಮಾರ ಬಂಡೆಹಳ್ಳಿ ವೆಂಕಟೇಶ್ ಕೊರಟಗೆರೆ ರೇಣುಕಾ ಗಂಗಾವತಿ ನಿರ್ದೇಶಕರು ಎಂ ಅಮೃತ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಸಹ ಶಿಕ್ಷಕರು ಪ್ರೌಢ ಶಾಲೆಯ ಹಾಗೂ ಕಾಲೇಜು ವಿದ್ಯಾರ್ಥಿ ವಿದ್ಯಾರ್ಥಿನಿಯರು ಇದ್ದರು.

# ನೊಂದಾಯಿಸದೇ ವೈದ್ಯಕೀಯ ಸಂಸ್ಥೆಗಳ ಮೇಲೆ ಕ್ರಮ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಖಾಸಗಿ ವೈದ್ಯಕೀಯ ಸೇವೆ ನೀಡುವ ಸಂಸ್ಥೆಗಳು ಕರ್ನಾಟಕ ಖಾಸಗಿ ವೈದ್ಯಕೀಯ ವೃತ್ತಿ ಅಧಿನಿಯಮ 2007ರ ಅಡಿಯಲ್ಲಿ ನೊಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದ್ದು, ಕೆಪಿಎಂಇಎ ಅಡಿ ನೊಂದಣಿ ಪಡೆಯದೇ ಇರುವ ಸಂಸ್ಥೆಗಳು ಕೂಡಲೇ ಆನ್‌ಲೈನ್ ಮೂಲಕ ನೊಂದಣಿ ಮಾಡಿಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ವೈದ್ಯಕೀಯ ಸೇವೆ ನೀಡುತ್ತಿರುವ ಖಾಸಗಿ ವ್ಯಕ್ತಿ–ಸಂಸ್ಥೆಗಳು ಕೆಪಿಎಂಇಎ ಅಧಿನಿಯಮ 2007ರಡಿ ನೊಂದಣಿಯನ್ನು ಪಡೆಯದೇ ವೈದ್ಯಕೀಯ ಸೇವೆ ನೀಡುತ್ತಿರುವುದು ಕಂಡು ಬಂದಿದೆ. ವೈದ್ಯಕೀಯ ಸೇವೆ ನೀಡಲು ಸೂಕ್ತ ವಿದ್ಯಾರ್ಹತೆ ಹೊಂದಿದ್ದರೂ ಸಹ ಕೆಪಿಎಂಇಎ ನೊಂದಣಿ ಪಡೆಯದೇ ಖಾಸಗಿ ವೈದ್ಯಕೀಯ ಸಂಸ್ಥೆಗಳನ್ನು ನಡೆಸುವುದು ಅಥವಾ ವೈದ್ಯಕೀಯ ಸೇವೆ ನೀಡುವುದು ನಿಯಮಬಾಹಿರವಾದ ದಂಡನೀಯ ಅಪರಾಧವಾಗಿರುತ್ತದೆ. ನೊಂದಣಿ ಮಾಡಿಕೊಳ್ಳದೇ ಖಾಸಗಿ ವೈದ್ಯಕೀಯ ಸೇವೆ ಸಂಸ್ಥೆಗಳು ವೈದ್ಯಕೀಯ ಸೇವೆ ಮುಂದುವರೆಸಿದ್ದಲ್ಲಿ ಅಂತಹ ಸಂಸ್ಥೆಗಳ ವಿರುದ್ದ ಕಾನೂನು ರಿತ್ಯ ಕ್ರಮ ಕೈಗೊಳ್ಳಲಾಗುವುದು.

ಹಲವು ಖಾಸಗಿ ವೈದ್ಯಕೀಯ ಸಂಸ್ಥೆಗಳು–ವ್ಯಕ್ತಿಗಳು ಆಯುಷ್ ಪದವಿಯನ್ನು ಪಡೆದು ಆಯುಷ ಪದ್ಧತಿಯಲ್ಲಿ ಖಾಸಗಿ ವೈದ್ಯಕೀಯ ಸೇವೆಗಾಗಿ ಕೆಪಿಎಂಇಎ ನೊಂದಣಿ ಪಡೆದು ಅಂತಹವರು ಅಲೋಪತಿ ವೈದ್ಯಕೀಯ ಪ್ರಾಕ್ಟೀಸ್ ಮಾಡುತ್ತಿರುವುದು ಕಂಡು ಬಂದಿದ್ದು, ಇದು ಕೂಡಾ ನಿಯಮಗಳಿಗೆ ವಿರುದ್ಧವಾಗಿದೆ ಹಾಗೂ ದಂಡನೀಯ ಅಪರಾಧವಾಗುತ್ತದೆ. ಆದ್ದರಿಂದ ವೈದ್ಯರು ಯಾವ ವೈದ್ಯಕೀಯ ಪದ್ಧತಿಯ ನೊಂದಣಿ ಪಡೆದಿರುತ್ತಾರೋ ಅದೇ ಪದ್ಧತಿಯಲ್ಲಿ ವೈದ್ಯಕೀಯ ಸೇವೆ ನೀಡಬೇಕು. ಈ ಕುರಿತು ಪರಿಶೀಲನೆಗಾಗಿ ತಾಲೂಕಾ ಆರೋಗ್ಯಾಧಿಕಾರಿಗಳ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಲಾಗಿದ್ದು ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ದ ಕ್ರಮ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗಮೇಶ್ವರ ಕಾಲೇಜ್ ಬಿಸಿಎ ವಿಭಾಗ :ಶೇ.100 ಫಲಿತಾಂಶ



**ಉದಯರಶ್ಮಿ ನ್ಯೂಸ್**

ಚಡಚಣ: ಪಟ್ಟಣದ ಶ್ರೀ ಸಂಗಮೇಶ್ವರ ಮಹಾವಿದ್ಯಾಲಯದ ಬಿಸಿಎ ವಿಭಾಗದ ವಿದ್ಯಾರ್ಥಿಗಳು ಶೈಕ್ಷಣಿಕ ವರ್ಷ 2022–23 ನೇ ಸಾಲಿನಲ್ಲಿ ನೂರಕ್ಕೆ ನೂರರಷ್ಟು ಫಲಿತಾಂಶ ಪಡೆದು ಉತ್ತಮ ಸಾಧನೆ ಮಾಡಿದ್ದಾರೆ.

ಪ್ರಥಮ ಸ್ಥಾನವನ್ನು ಕುಮಾರಿ. ವಿಜಯಲಕ್ಷೀ ಸಿದ್ದಾ (91.55), ದ್ವಿತೀಯ ಸ್ಥಾನವನ್ನು ಕುಮಾರಿ. ಐಶ್ವರ್ಯ ಅವಟಿ(89.34), ತೃತೀಯ ಸ್ಥಾನವನ್ನು ಕುಮಾರಿ. ವರ್ಷಾ ಖಜ್ಜೂರಗಿ(88.00), ಉನ್ನತ ಶ್ರೇಣಿಯಲ್ಲಿ ಅಂಕ ಗಳಿಸಿ ಸಾಧನೆಗೈದಿದ್ದಾರೆ.

ಈ ವಿದ್ಯಾರ್ಥಿಗಳ ಸಾಧನೆಗೆ ಶ್ರೀ ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಮತ್ತು ಪ್ರಾಧ್ಯಾಪಕರು, ಬಿಸಿಎ ವಿಭಾಗದ ಮುಖ್ಯಸ್ಥರು, ಹಾಗೂ ಬೋಧಕೇತರ ಸಿಬ್ಬಂದಿ ವೃಂದ ಹರ್ಷ ವ್ಯಕ್ತಪಡಿಸುವ ಮೂಲಕ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

# ಪುತ್ರರೊಂದಿಗೆ ಪ್ರಧಾನಿ ಮೋದಿ ಭೇಟಿಯಾದ ದೇವೇಗೌಡ

**ಉದಯರಶ್ಮಿ ನ್ಯೂಸ್**



ನವದೆಹಲಿ: ಜಾತ್ಯತೀತ ಜನತಾ ದಳ (ಜೆಡಿಎಸ್) ಪಕ್ಷವು ಎನ್‌ಡಿಎ ಮೈತ್ರಿಕೂಟದ ಜತೆಗೆ ಅಧಿಕೃತವಾಗಿ ಸೇರ್ಪಡೆಗೊಂಡ ಬಳಿಕ ಇದೇ ಮೊದಲ ಭಾರಿಗೆ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ಪುತ್ರರ ಜತೆಗೆ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾಗಿದ್ದಾರೆ.

ನವ ದೆಹಲಿಯ ಪ್ರಧಾನಿ ಕಚೇ–ರಿಯಲ್ಲಿ ಮೋದಿಯನ್ನು ಭೇಟಿ ಮಾಡಲಾಗಿದ್ದು, ದೇವೇಗೌಡರ ಜತೆಗೆ ಎಚ್.ಡಿ. ಕುಮಾರಸ್ವಾಮಿ, ಎಚ್.ಡಿ. ರೇವಣ್ಣ ಹಾಗೂ ಹಾಸನ ಸಂಸದ ಪ್ರಜ್ವಲ್ ರೇವಣ್ಣ, ಶಾಸಕ ಸಿ.ಎನ್.ಬಾಲಕೃಷ್ಣ ಇದ್ದರು.

ಜೆಡಿಎಸ್ ನಾಯಕರ ಭೇಟಿ ಕು–ರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, 'ರಾಷ್ಟ್ರದ ಪ್ರಗತಿಗೆ ದೇವೇಗೌಡರ ಅನುಕರಣೀಯ ಕೊಡುಗೆಯನ್ನು ಭಾರತವು ಬಹಳವಾಗಿ ಗೌರವಿಸುತ್ತದೆ. ವೈವಿಧ್ಯಮಯ ನೀತಿ, ವಿಷಯಗಳ ಕುರಿತು ಅವರ ಆಲೋಚನೆ ಹಾಗೂ ಒಳನೋಟ ದೂರದೃಷ್ಟಿಯಿಂದ ಕೂಡಿದೆ' ಎಂದು ಬರೆದುಕೊಂಡಿದ್ದಾರೆ.

ಪ್ರಧಾನಿ ಭೇಟಿ ಕು–ರಿತು ಸಂಸತಸ ವ್ಯಕ್ತಪಡಿಸಿರುವ ಕುಮಾರಸ್ವಾಮಿ, 'ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಹಾಗೂ ಮಾಜಿ ಪ್ರಧಾನಮಂತ್ರಿಗಳಾದ ಹೆಚ್.ಡಿ. ದೇವೇಗೌಡರ ನಡುವಿನ ಬಾಂಧವ್ಯ, ಅವರಿಬ್ಬರೂ ಪರಸ್ಪರ ಇರಿಸಿಕೊಂಡಿರುವ ಪ್ರೀತಿ, ವಿಶ್ವಾಸವನ್ನು ಕಂಡು ನನ್ನ ಮನಸ್ಸು ಉಕ್ಕಿ ಬಂದಿದೆ. ಸಂಸತ್ ಭವನದಲ್ಲಿರುವ ಪ್ರಧಾನಿಗಳ ಕಾರ್ಯಾಲಯದಲ್ಲಿ ನಡೆದ ಈ ಭೇಟಿಯು ಅತ್ಯಂತ ಅವಿಸ್ಮರಣೀಯ. ಮಾನ್ಯ ಪ್ರಧಾನಮಂತ್ರಿಗಳು ನಮ್ಮ ಬಗ್ಗೆ ತೋರಿದ ಪ್ರೀತಿ, ವಿಶ್ವಾಸ, ವಾತ್ಸಲ್ಯಕ್ಕೆ ನಾನು ಆಭಾರಿ' ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

# ಡಿ.24ರಂದು ವೃಕ್ಷತ್ಥಾನ ಪಾರಂಪರಿಕ ಓಟ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಅರಣ್ಯ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ವೃಕ್ಷ ಅಭಿಯಾನ ಪ್ರತಿಷ್ಠಾನ ವಿಜಯಪುರ ಇವರ ಸಂಯುಕ್ತಾಶ್ರಯದಲ್ಲಿ ಡಿ.24 ರಂದು ಬೆಳಿಗ್ಗೆ 6 ಗಂಟೆಗೆ ವೃಕ್ಷೋತ್ಥಾನ ಪಾರಂಪರಿಕ ಓಟ–2023 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಬೆಳಿಗ್ಗೆ 9 ಗಂಟೆಗೆ ಜರುಗುವ ವೃಕ್ಷಥಾನ್ ಸಮಾರೋಪ ಸಮಾರಂಭವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕಾನೂನು ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಹೆಚ್.ಕೆ.ಪಾಟೀಲ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವರಾದ ಈಶ್ವರ ಖಂಡ್ರೆ ಉಪಸ್ಥಿತರಿರಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಆರ್.ಪಾಟೀಲ (ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಸಂಸದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ, ಭೀಮನಗೌಡ(ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ, ವಿಶೇಷ ಆಹ್ವಾನಿತರಾಗಿ ಜಲ ಸಂರಕ್ಷಣೆ ತಜ್ಞರು ಹಾಗೂ ಪರಿಸರವಾದಿಗಳಾದ ಮ್ಯಾಗಸ್ಸೇ ಪ್ರಶಸ್ತಿ ಪುರಸ್ಕೃತರಾದ ರಾಜೇಂದ್ರ ಸಿಂದಗ್, ಸೇರಿದಂತೆ ಜಿಲ್ಲೆಯ ವಿವಿಧ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ರಿಚರ್ಡ ವಿನ್ಸೆಂಟ್ ಡಿಸೋಜಾ ಸೂಚನೆ

# ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಕಾರ್ಯಕ್ರಮ ಹಮ್ಮಿಕೊಳ್ಳಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಕಳೆದ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಫಲಿತಾಂಶದಲ್ಲಿ ಕಡಿಮೆ ಫಲಿತಾಂಶ ಬಂದ ಶಾಲೆಗಳನ್ನು ಗುರುತಿಸಿ, ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಪ್ರಸಕ್ತ ಸಾಲಿನ ಜಿಲ್ಲೆಯ ಎಸ್.ಎಸ್.ಎಲ್.ಸಿ. ಫಲಿತಾಂಶ ಹೆಚ್ಚಳಕ್ಕೆ ಕ್ರಮ ವಹಿಸುವಂತೆ ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ.ರಿಚರ್ಡ ವಿನ್ಸೆಂಟ್ ಡಿಸೋಜಾ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, 2023–24ನೇ ಸಾಲಿನ ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆಗೆ ಜಿಲ್ಲೆಯಾದ್ಯಂತ ಶೈಕ್ಷಣಿಕ ಕಾರ್ಯಾಗಾರ ಹಮ್ಮಿಕೊಂಡು ಕಡಿಮೆ ಫಲಿತಾಂಶ ಬಂದ ಶಾಲೆಗಳಲ್ಲಿ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಿ, ಫಲಿತಾಂಶ ಸುಧಾರಣೆಗೆ ಕ್ರಮ ವಹಿಸಬೇಕು. ಈಗಾಗಲೇ ದತ್ತು ಪಡೆದುಕೊಂಡ ಶಾಲೆಗಳಿಗೆ ಕಡ್ಡಾಯವಾಗಿ ಶಿಕ್ಷಣ ಇಲಾಖೆ ಅಧಿಕಾರಿಗಳು ಪ್ರತಿ ಮಾಹೆ ಎರಡು ಬಾರಿ ಭೇಟಿ ನೀಡಿ ಪರಿಶೀಲನೆ ನಡೆಸಿ, ಆ ಶಾಲೆಯ ಶೈಕ್ಷಣಿಕ ಪ್ರಗತಿ ಮತ್ತು ಫಲಿತಾಂಶ ಉತ್ತಮಪಡಿಸಲು ಸೂಕ್ತ ಮಾರ್ಗದರ್ಶನ ಮಾಡಬೇಕು. ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಭೂಮಿಯ ಖಾತಾ ಉತಾರೆ ಪಡೆದು ಒಂದು ವಾರದಲ್ಲಿ ವರದಿ ಸಲ್ಲಿಸುವಂತೆ ಸಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಜಿಲ್ಲೆಯ ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆಗೆ ಸಮರ್ಪಕವಾಗಿ ಶೈಕ್ಷಣಿಕ ಯೋಜನೆಗಳನ್ನು ಜಾರಿಗೊಳಿಸಬೇಕು. ಅಭಿಯಾನದ ರೀತಿಯಲ್ಲಿ ಕಾರ್ಯನಿರ್ವಹಿಸಿ ಫಲಿತಾಂಶ ಸುಧಾರಣೆಗೆ ಕ್ರಮ ವಹಿಸಬೇಕು.ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರು ಕಾಲಕಾಲಕ್ಕೆ ಶಾಲೆಗಳಿಗೆ ಭೇಟಿ ನೀಡಿ ಶೈಕ್ಷಣಿಕ ಗುಣಮಟ್ಟ, ಬೋಧನಾ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಬೇಕು. ಶಾಲೆಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸರಿಯಾಗಿ ಬೋಧನೆ ಮಾಡದ ಶಿಕ್ಷಕರ ಮೇಲೆ ನಿರ್ದಾಕ್ಷಿಣ್ಯವಾಗಿ ಯಾವುದೇ ಮುಲಾಜಿಲ್ಲದೇ ಕ್ರಮ ಕೈಗೊಳ್ಳುವಂತೆ ಉಪನಿರ್ದೇಶಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ವಿಶೇಷ ಗಮನ ಹರಿಸಿ ಆದ್ಯತೆ ಮೇಲೆ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಕ್ರಮ ವಹಿಸಬೇಕು. ಶಿಕ್ಷಣಾಧಿಕಾರಿಗಳು ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವ ಗುರಿಯೊಂದಿಗೆ ತಾಲೂಕಿನಾದ್ಯಂತೆ ವಿಶೇಷ ಕ್ರೀಯಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಂಡು ಉತ್ತಮ ಬೋಧನಾ ವ್ಯವಸ್ಥೆ, ಗುಣಮಟ್ಟದ ಶಿಕ್ಷಣ ನೀಡಲು ಮಾರ್ಗದರ್ಶನ ನೀಡಬೇಕು. ಇದೊಂದು ಟಾಸ್ಕಾಗಿ ಪರಿಗಣಿಸಿ ವಿಶೇಷ ಆಸಕ್ತಿ ವಹಿಸಿ ಶೈಕ್ಷಣಿಕ ಫಲಿತಾಂಶ ಸುಧಾರಣೆಗೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಾದ್ಯಂತ ಬರಗಾಲ ಘೋಷಣೆಯಾಗಿದ್ದು, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸಲು ಜಿಲ್ಲೆಯ ಎಲ್ಲ



ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಮೇವಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು. ರೇಷ್ಮೆ ಬೆಳೆಗೆ ಉತ್ತಮ ಅವಕಾಶ ಇರುವುದರಿಂದ ರೈತರಿಗೆ ರೇಷ್ಮೆ ಬೆಳೆ ಕುರಿತು ಪ್ರೊತ್ಸಾಹಿಸಬೇಕು. ಕೃಷಿ–ತೋಟಗಾರಿಕೆ ಇಲಾಖೆಗಳು ಬರ ಪರಿಸ್ಥಿತಿಯಲ್ಲಿ ಕೃಷಿ ಪೂರಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಮೂಲಕ ರೈತರ ಜೀವನ ಮಟ್ಟ ಸುಧಾರಿಸಲು ಕ್ರಮ ಕೈಗೊಂಡು, ಪೈಲಟ್ ಬೇಸ್‌ನಲ್ಲಿ ಹೈನುಗಾರಿಕೆಗೆ ಒತ್ತು ನೀಡಬೇಕು. ಕೃಷಿ ಉಪ ಕಸುಬುಗಳಾದ ಸಾವಯವ ಗೊಬ್ಬರ ತಯಾರಿಕೆ, ಕುರಿ–ಹಸು ಸಾಕಾಣಿಕೆ, ಇಂತಹ ಕಸಬುಗಳಿಗೆ ರೈತರನ್ನು ಪ್ರೇರೆಪಿಸಿ ವಿವಿಧ ಕೃಷಿ ಪೂರಕ ಚಟುವಟಿಕೆಗಳಿಂದ ಉತ್ಪನ್ನ ದೊರಕುವಂತೆ ವಿವಿಧ ಯೋಜನೆಗಳ ಮೂಲಕ ರೈತರಿಗೆ ಸೌಲಭ್ಯ ದೊರಕಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಎಲ್ಲ ಅಂಗನವಾಡಿಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಅಧಿಕಾರಿಗಳು ಕಾಲಕಾಲಕ್ಕೆ ಕೇಂದ್ರಗಳಿಗೆ ಭೇಟಿ ಮಾಡಿ, ಭೇಟಿ ಮಾಡಿದ ವರದಿ ದಾಖಲಿಸಬೇಕು. ಕೇಂದ್ರದಲ್ಲಿನ ಆಹಾರ ಗುಣಮಟ್ಟ, ಬೋಧನಾ ಕ್ರಮ ಅಂಗನವಾಡಿ ಕಾರ್ಯಕರ್ತೆಯರ ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಬೇಕು. ಏನಾದರೂ ಕುಂದು ಕೊರತೆಗಳಿದ್ದಲ್ಲಿ ವ್ಯವಸ್ಥೆ ಸುಧಾರಣೆಗೆ ಕ್ರಮ ವಹಿಸಬೇಕು. ಎಲ್ಲ ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳು ಹೊಂದಬೇಕು. ನಿವೇಶನ ಇಲ್ಲದೇ ಇರುವ ಅಂಗನವಾಡಿಗಳಿಗೆ ಸೂಕ್ತ ನಿವೇಶನ ಗುರುತಿಸಿ ಸ್ವಂತ ಕಟ್ಟಡಕ್ಕೆ ಕ್ರಮ ವಹಿಸಬೇಕು. ಈಗಾಗಲೇ ಚಾಲ್ತಿಯಲ್ಲಿರುವ ಅಂಗನವಾಡಿ ಕಟ್ಟಡ ಕಾಮಗಾರಿಗಳನ್ನು ಬೇಗ ಮುಗಿಸಿ ಸ್ವಾಧೀನಕ್ಕೆ ಪಡೆದುಕೊಳ್ಳಬೇಕು. ಇನ್ನೂ ಬಾಕಿ ಉಳಿದ ಅಂಗನವಾಡಿಗಳ ನಿವೇಶನಕ್ಕಾಗಿ ಸಂಬಂಧಪಟ್ಟ ನಗರಸಭೆ, ಪುರಸಭೆ ಪಟ್ಟಣ ಪಂಚಾಯತಿ ಅಧಿಕಾರಿಗಳನ್ನು ಸಂಪರ್ಕಿಸಿ ನಗರ ಪ್ರದೇಶದಲ್ಲಿ ನಿವೇಶನ ಪಡೆಯಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಸಕರಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಕುಡಿಯುವ ನೀರಿನ ಅವಶ್ಯಕತೆ ಇರುವ ಗ್ರಾಮಗಳಲ್ಲಿ ಟೆಂಡರ್ ಕರೆದು ಟ್ಯಾಂಕರ್ ಮೂಲಕ ನೀರು ಪೂರೈಸಲು ಆದ್ಯತೆ ನೀಡಬೇಕು. ಕಲುಷಿತ ನೀರು ಪೂರೈಕೆಯಾಗದಂತೆ ಜಾಗೃತಿ ವಹಿಸಿ, ಪರೀಕ್ಷಿಸಿದ ನಂತರ ನೀರು ಒದಗಿಸಲು ಕ್ರಮ ವಹಿಸಬೇಕು ಎಂದು ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಕಾರ್ಯನಿರ್ವಹಿಸಿ, ಬಾಲ್ಯವಿವಾಹ ತಡೆಗೆ ಕ್ರಮ ವಹಿಸಬೇಕು. ಡಿಸೆಂಬರ್– ಜನವರಿ ತಿಂಗಳಲ್ಲಿ ಮದುವೆ ಸೀಜನ್ ಇರುವುದರಿಂದ ಕಟ್ಟುನಿಟ್ಟಾಗಿ ಗ್ರಾಮೀಣ ಮಟ್ಟದಲ್ಲಿ ನಿಗಾ ವಹಿಸಿ ಬಾಲ್ಯ ವಿವಾಹ ತಡೆಗೆ ಕ್ರಮ ವಹಿಸಬೇಕು. ಬಾಲ್ಯ ವಿವಾಹ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಬಾಲ್ಯ ವಿವಾಹ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಲ್ಯ ವಿವಾಹ ನಡೆಸುವವರ ವಿರುದ್ಧ ಎಫ್‌ಆಯ್‌ಆರ್ ದಾಖಲಿಸಬೇಕು. ಕಾನೂನು ಸೇವಾ ಪ್ರಾಧಿಕಾರದೊಂದಿಗೆ ಸಮಾಲೋಚನೆ ನಡೆಸಿ, ಬಾಲ್ಯವಿವಾಹ ತಡೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಬಾಲ್ಯವಿವಾಹಗಳು ನಡೆಯದಂತೆ ಜನರಲ್ಲಿ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಅವರು ಸೂಚನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿನದಲ್ಲಿ ಬರುವ ವಸತಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಹೆಚ್ಚಿಸಲು ಕ್ರಮ ವಹಿಸಬೇಕು. ವಸತಿ ನಿಲಯಗಳಲ್ಲಿ ಕಲ್ಪಿಸಲಾಗುತ್ತಿರುವ ಮೂಲಭೂತ ಸೌಲಭ್ಯಗಳ ಕುರಿತು ಕಾಲಕಾಲಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ನ್ಯೂನ್ಯತೆಗಳು ಕಂಡು ಬಂದಲ್ಲಿ ಕೂಡಲೆ ಪರಿಹಾರಕ್ಕೆ ಕ್ರಮ ವಹಿಸಬೇಕು. ವಸತಿ ನಿಲಯದ ಆವರಣದಲ್ಲಿ ಗಿಡ ಮರಗಳನ್ನು ಬೆಳೆಸಿ ಮಕ್ಕಳಲ್ಲಿ ಪರಿಸರ ಕಾಳಜಿ ಮೂಡಿಸಲು ಕ್ರಮ ವಹಿಸಬೇಕು ಎಂದು ಸೂಚಿಸಿದ ಅವರು, ಈಗಾಗಲೇ ಜಿಲ್ಲೆಯಲ್ಲಿನ ಕೆಲವು ವಸತಿ ಶಾಲೆಗಳು ಮಾದರಿ ವಸತಿ ಶಾಲೆಗಳನ್ನಾಗಿಸಲು ವಿಶೇಷ ಮುತುವರ್ಜಿ ವಹಿಸಿದ್ದ ಜಿಲ್ಲಾ ಪಂಚಾಯತ್ ಸಿಇಓ ಅವರ ಕಾರ್ಯವನ್ನು ಪ್ರಶಂಶಸಿದ ಅವರು, ಇದೇ ಮಾದರಿಯಲ್ಲಿ ಜಿಲ್ಲೆಯ ಎಲ್ಲ ವಸತಿ ಶಾಲೆಗಳಲ್ಲಿ ವ್ಯವಸ್ಥೆ ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಜನತಾ ದರ್ಶನದಲ್ಲಿ ಸ್ವೀಕೃತವಾಗುವ ಕುಂದು–ಕೊರತೆ ಅರ್ಜಿಗಳಿನ್ನು ಆದ್ಯತೆ ಮೇಲೆ ಪರಿಹರಿಸಿ ವಿಲೇವಾರಿಗೆ ಕ್ರಮ ವಹಿಸಬೇಕು. ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಾದ ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮೀ, ಅನ್ನಭಾಗ್ಯ ಹಾಗೂ ಯುವ ನಿಧಿ ಸೇರಿದಂತೆ ಎಲ್ಲ ಯೋಜನೆಗಳನ್ನು ಸಮರ್ಪಕವಾಗಿ ಎಲ್ಲ ಅರ್ಹ ಫಲಾನುಭವಿಗಳಿಗೆ ದೊರೆಯುವ ನಿಟ್ಟಿನಲ್ಲಿ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಫಲಿತಾಂಶ ಕಡಿಮೆ ಬಂದಿರುವ ಶಾಲೆಗಳನ್ನು ಗುರುತಿಸಿ, ಆ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಶೈಕ್ಷಣಿಕ ಪುನಶ್ಚೇತನದಡಿ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಕ್ರಮ ವಹಿಸಬೇಕು. ಜಿಲ್ಲೆಯ ಇತರೆ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳಿಗೆ ಶಾಲೆಗಳನ್ನು ದತ್ತು ನೀಡುವ ಮೂಲಕ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು ಸುಸ್ಥಿತಿಯಲ್ಲಿರುವಂತೆ ಹಾಗೂ ವ್ಯವಸ್ಥಿತವಾಗಿ ಕಾರ್ಯನಿರ್ವಹಣೆ ಕುರಿತು ಕೇಂದ್ರಗಳಲ್ಲಿನ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಬೇಕು. ಅಂಗನವಾಡಿ ಕಾರ್ಯಕರ್ತೆರು ಲಭ್ಯವಿಲ್ಲದ ಅಂಗನವಾಡಿಗಳಲ್ಲಿ ಕಾರ್ಯವ್ಯವಸ್ಥೆ ಮೇಲೆ ನಿಯೋಜನೆ ಮಾಡಿಕೊಂಡು ಮಕ್ಕಳಿಗೆ ತೊಂದರೆಯಾಗದಂತೆ, ಯಾವುದೇ ದೂರು ಬಾರದಂತೆ ಸಮರ್ಪಕವಾಗಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುವಂತೆ ಕ್ರಮ ವಹಿಸಬೇಕು ಎಂದು ಅವರು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಅವರು ಮಾತನಾಡಿ, ಈಗಾಗಲೇ ಜಿಲ್ಲೆಯ ಅಂಗನವಾಡಿ ಮತ್ತು ಶಾಲೆಗಳಲ್ಲಿ ಪಾಲಕರ ಸಭೆ ಏರ್ಪಡಿಸಿ, ಕುಂದು ಕೊರತೆಗಳನ್ನು ಸಭೆಯಲ್ಲಿ ಪಾಲಕರ ಸಮ್ಮುಖದಲ್ಲಿ ಆಲಿಸಿ, ಪರಿಹರಿಸಲು ಕ್ರಮ ವಹಿಸಲಾಗಿದೆ. ಮಕ್ಕಳ ಕ್ರಿಯಾತ್ಮಕ ಚಟುವಟಿಕೆಗಳನ್ನು ಪಾಲಕರು ಗಮನಿಸುವುದರಿಂದ, ತಮ್ಮ ಮಕ್ಕಳ ಚಟುವಟಿಕೆಗಳನ್ನು ಪಾಲಕರು ಖುದ್ದಾಗಿ ನೋಡುವುದರಿಂದ ಆ ಮಟ್ಟದಲ್ಲಿಯೇ ಪರಿಹಾರ ಕಲ್ಪಿಸಲು ಅತ್ಯುಪಯುಕ್ತವಾಗಿದ್ದು, ಪಾಲಕರ ಸಭೆ ಜಿಲ್ಲೆಯಲ್ಲಿ ಯಶಸ್ವಿಯಾಗಿದೆ. ಬಾಲ್ಯವಿವಾಹ ತಡೆ ನಿಟ್ಟಿನಲ್ಲಿ ಕಾನೂನು ಅರಿವು ಅಭಿಯಾನ ಕೈಗೊಂಡು ಗ್ರಾಮೀಣ ಮಟ್ಟದಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ ಆಜೂರ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ವಕೀಲರು ಪಕ್ಷಗಾರರಿಗೆ ನ್ಯಾಯ ಒದಗಿಸಿ :ನ್ಯಾ.ಗರಗ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ವಕೀಲ ವೃತ್ತಿಗೆ ಸಮಾಜದಲ್ಲಿ ಹೆಚ್ಚಿನ ಗೌರವ ಇದೆ. ವಕೀಲರು ನಿರಂತರ ಅಧ್ಯಯನ ಮಾಡುವ ಮೂಲಕ ತಮ್ಮ ಪಕ್ಷಗಾರರಿಗೆ ನ್ಯಾಯ ಒದಗಿಸುತ್ತಾ ಸಂವಿಧಾನದ ಆಶಯ ಹಾಗೂ ಹಕ್ಕುಗಳಿಗೆ ಧಕ್ಕೆ ತರದಂತೆ ಇರಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶೆ ಲಕ್ಷ್ಮೀ ನಿಂಗಪ್ಪ ಗರಗ ಹೇಳಿದರು.

ಪಟ್ಟಣದ ನ್ಯಾಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಕೀಲರ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಹಿರಿಯ ವಕೀಲರು ಕಿರಿಯ ವಕೀಲರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು. ಕಿರಿಯ ವಕೀಲರು ನಿರಂತರ ಕಲಾಪಗಳಲ್ಲಿ ಭಾಗಿಯಾಗಬೇಕು. ಯಾವ ಕಾರಣಕ್ಕಾಗಿ ಸಮಯ ತೆದುಕೊಳ್ಳುತ್ತಿದ್ದೇವೆ ಎಂಬುದನ್ನ ಮೊದಲು ತಿಳಿದಿರಬೇಕು. ಕಲಾಪಗಳಲ್ಲಿ ಭಾಗಿಯಾಗುವ ಮುನ್ನ ಪ್ರಕರಣವನ್ನು ತಿಳಿದುಕೊಳ್ಳಬೇಕು. ಪ್ರಕರಣದ ಹಂತಗಳ ಬಗ್ಗೆ ಅಭ್ಯಾಸ ಮಾಡಬೇಕು. ಪ್ರಕರಣಗಳಲ್ಲಿ ಸಲ್ಲಿಸ ಬಹುದಾದ ಅರ್ಜಿಗಳನ್ನು ಸ್ವತಃ ನೀವೆ ಟೈಪ್ ಮಾಡಿದಲ್ಲಿ ಬೇಗನೆ ವೃತ್ತಿಯಲ್ಲಿ ನಿಪುಣತೆ ಪಡೆಯಬಹುದು ಎಂದು ಕಿವಿ ಮಾತು ಹೇಳಿದರು.

ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಸಂಪತ್ತಕುಮಾರ ಬಳೂಲಗಿಡದ ಮಾತನಾಡಿ, ಸಮಾಜದಲ್ಲಿ ವಕೀಲರ ಪಾತ್ರ ಬಹಳ ಮಹತ್ವದ್ದು. ವಕೀಲರು ಎಷ್ಟೇ ಅಧ್ಯಯನ ಮಾಡಿದರೂ ಕಡಿಮೆ ಎಂದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್.ಮಾಲಗತ್ತಿ, ಸರ್ಕಾರಿ ವಕೀಲ ಬಸವರಾಜ ಆಹೇರಿ, ನ್ಯಾಯವಾದಿಗಳಾದ ಎಸ್.ಎಸ್. ಹೂಗಾರ, ಎಸ್.ಬಿ.ಬಾಚಿಹಾಳ, ಎಚ್.ವಾಯ್.ಪಾಟೀಲ, ಎಸ್.ಎಂ.ಚಿಲ್ಲಾಳಶೆಟ್ಟರ, ಶ್ರೀದೇವಿ ರಾಜೂರ ಮಾತನಾಡಿ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಎಜಿಪಿ ಎಚ್.ಎಲ್.ಸರೂರ, ಸಂಘದ ಉಪಾಧ್ಯಕ್ಷ ಎಚ್.ಜಿ.ನಾಗೋಡ ವೇದಿಕೆಯಲ್ಲಿದ್ದರು. ಹಿರಿಯ ವಕೀಲರಾದ ಆರ್.ಬಿ.ಪಾಟೀಲ, ಎಂ.ಎ.ಮುದ್ದೇಬಿಹಾಳ, ಜೆ.ಎ.ಚಿನಿವಾರ, ವಿ.ಜಿ.ಮದರಕಲ್ಲ, ಎನ್.ಆರ್. ಮೊಕಾಶಿ ನ್ಯಾಯವಾದಿಗಳಾದ ಎಸ್.ಎಂ.ಕಿಣಗಿ, ರಾಯನಗೌಡ ಬಿರಾದಾರ, ಹಸೀನಾ ಅನಂತಪೂರ, ರೇಣುಕಾ ಪಾಟೀಲ, ಎಚ್.ಟಿ.ಪೂಜಾರಿ, ಎಚ್.ಎಚ್.ಬಡಿಗೇರ, ರವಿ ನಾಲತವಾಡ, ಎನ್.ಐ.ಕೇಸಾಪೂರ, ಎನ್.ಬಿ.ಮುದ್ನಾಳ, ಚೇತನ ಶಿವಶಿಂಪಿ, ಸಾಬಣ್ಣ ಚಳ್ಳಗಿ, ವಿರೇಶ ಬಿರಾದಾರ, ಸಂತೋಷ ನಾಯಕ ಸೇರಿದಂತೆ ಮತ್ತೀತರರು ಭಾಗಿಯಾಗಿದ್ದರು. ಸಂಘದ ಪ್ರಧಾನ ಕಾರ್ಯದರ್ಶಿ ಪಿ.ಬಿ.ಗೌಡರ ಕಾರ್ಯಕ್ರಮವನ್ನು ನಿರ್ವಹಿಸಿದರು.

# ಸಿಂದಗಿಯಲ್ಲಿ ಚಿಣ್ಣರ ನುಡಿ ಸಿರಿ ಇಂದು

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಸರಕಾರಿ ಆದರ್ಶ ವಿದ್ಯಾಲಯದ ಸಭಾಭವನದಲ್ಲಿ ಸ್ಥಳಿಯ ಮಕ್ಕಳ ಬಳಗ ಸಿಂದಗಿ ಇವರು ಸರಕಾರಿ ಆದರ್ಶ ವಿದ್ಯಾಲಯದ ಸಹಯೋಗದಲ್ಲಿ ಡಿ.22 ರಂದು ಮುಂಜಾನೆ 10 ಗಂಟೆಗೆ ಚಿಣ್ಣರ ನುಡಿ ಸಿರಿ–47 ಕಾರ್ಯಕ್ರಮ ಆಯೋಜಿಸಿದ್ದಾರೆ.

ಉದ್ಘಾಟನೆ: ಶಾಸಕ ಅಶೋಕ ಮನಗೂಳಿ ಅವರು 47ನೇ ಚಿಣ್ಣರ ನುಡಿ ಸಿರಿ ಕಾರ್ಯಕ್ರಮದ ಜ್ಯೋತಿ ಬೆಳಗಿಸುವರು. ಸರಕಾರಿ ಆದರ್ಶ ವಿದ್ಯಾಲಯದ ವಿದ್ಯಾರ್ಥಿನಿ ವರ್ಷಿಣಿ ನಾಯಕ ಸಸಿಗೆ ನೀರುಣಿಸುವರು. ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ರವಿ ಬಮ್ಮಣ್ಣಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಲೆಯ ವಿದ್ಯಾರ್ಥಿನಿ ಶರಧಿ ಹಿರೇಮಠ, ವಿಜಯಪುರದ ರಾಮಕೃಷ್ಣ ವಿದ್ಯಾಶಾಲೆಯ ವಿದ್ಯಾರ್ಥಿನಿ ದಾನೇಶ್ವರಿ ಆಲಾಳ ಆಗಮಿಸುವರು.

**ಗೋಷ್ಠಿ–1: ಹಳೆಬೇರು ಹೊಸ ಚಿಗುರು.**

ಸರಕಾರಿ ಆದರ್ಶ ವಿದ್ಯಾಲಯದ ಮುಖ್ಯಾದ್ಯಾಪಕ ಎಸ್.ಕೆ. ಬಿರಾದಾರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಕ್ಕಳ ಸಾಹಿತಿ ಎಸ್.ಎಸ್. ಸಾತಿಹಾಳ ಆಗಮಿಸುವರು. ಮಕ್ಕಳ ಬಳಗದ ಸಂಚಾಲಕ ಹ.ಮ. ಪೂಜಾರ ಉಪಸ್ಥಿತರಿರುವರು. ವಿದ್ಯಾರ್ಥಿನಿ ವೈಷ್ಣವಿ ಲಕ್ಷಾನಟ್ಟಿ ಅವರು ನಾನು ಓದಿದ ಕವನ ಸಂಕಲನ ಕುರಿತು, ವಿದ್ಯಾರ್ಥಿನಿ ಶ್ರೀನಿಧಿ ಹುಲಗಬಾಳ ಅವರು ನಾನು ಓದಿದ ಮಕ್ಕಳ ಕಾದಂಬರಿ ಕುರಿತು ಉಪನ್ಯಾಸ ನೀಡುವರು.

**ಗೋಷ್ಠಿ–2: ಪುಸ್ತಕ ಓದು ಮಸ್ತಕ ತಣಿಸು**

ವಿದ್ಯಾರ್ಥಿ ಶ್ರೀಶೈಲ ಮೂಲಿಮನಿ ಅಧ್ಯಕ್ಷತೆ ವಹಿಸುವರು. ವಿದ್ಯಾರ್ಥಿನಿ ನಂದಿತಾ ಸಿಂದಗಿ ಅವರು ನಾವೇಕೆ ಓದಬೇಕು ಕುರಿತು, ವಿದ್ಯಾರ್ಥಿನಿ ಅವರು ನಾನು ಮೆಚ್ಚಿದ ಕವನ ಕುರಿತು, ವಿದ್ಯಾರ್ಥಿನಿ ರಕ್ಷಿತಾ ಸಣ್ಣಹಳ್ಳಿ ಅವರು ನಾನು ಮೆಚ್ಚಿದ ಕಥೆ ಕುರಿತು ಉಪನ್ಯಾಸ ನೀಡುವರು.

ಗೋಷ್ಠಿ–3: ಮಕ್ಕಳ ಮನದಾಳ ಮಾತು

ಸಿಂದಗಿಯ ಪ್ರೇರನಾ ಪಬ್ಲಿಕ್ ಸ್ಕೂಲಿನ ವಿದ್ಯಾರ್ಥಿನಿ ನಂದಿನಿ ಚವ್ಹಾಣ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಪದ್ಮರಾಜ ಪಬ್ಲಿಕ್ ಸ್ಕೂಲ್‌ನ ಸಂಜನಾ ಮಾರ್ಸನಳ್ಳಿ ಆಗಮಿಸುವರು. ವಿದ್ಯಾರ್ಥಿ ಅನೀಲ ಕಾಮನಕೇರಿ ಅವರು ನನ್ನ ಮೇಲಿನ ಒತ್ತಡಗಳು ಕುರಿತು, ವಿದ್ಯಾರ್ಥಿನಿ ವಿಜಯಲಕ್ಷ್ಮೀ ವಸ್ತ್ರದ ಅವರು ನಮಗೂ ಹಕ್ಕುಗಳಿವೆ ಕುರಿತು, ವಿದ್ಯಾರ್ಥಿನಿ ಲಕ್ಷ್ಮೀ ಚಬನೂರ ಅವರು ನಮಗೊಂದು ಗುರಿ ಇರಬೇಕು ಕುರಿತು ಉಪನ್ಯಾಸ ನೀಡುವರು.

ಸಮಾರೋಪ ಸಮಾರಂಭ:

ಸರಕಾರಿ ಆದರ್ಶ ವಿದ್ಯಾಲಯದ ಶಿಕ್ಷಕಿ, ಸಾಹಿತಿ ಜ್ಯೋತಿ ನಂದಿಮಠ ಅಧ್ಯಕ್ಷತೆ ವಹಿಸುವರು. ಶಿಕ್ಷಕ ನಟರಾಜ ಕುಂಬಾರ ಉಪಸ್ಥಿತರಿರುವರು.

ವಿದ್ಯಾರ್ಥಿಗಳಾದ ಶ್ರದ್ಧಾ ಹೊಳಿ, ಸುನಂದಾ ಚಿಗರಳ್ಳಿ ಅನಿಸಿಕೆ ವ್ಯಕ್ತ ಪಡಿಸುವರು ಎಂದು ಮಕ್ಕಳ ಬಳಗದ ಪ್ರಕಟಣೆಯಲ್ಲಿ ತಿಳಿಸಿದೆ

# ಡಿ.22ರಂದು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಶ್ರೀ ಶಾರದಾಂಬಾ ಎಜ್ಯುಕೇಶನ್ ಟ್ರಸ್ಟ್ ತಿಕೋಟಾ ಇವರ ಸಹಯೋಗದಲ್ಲಿ ಡಿ.22ರಂದು ತಿಕೋಟಾದ ಕೋಟ್ಯಾಳ ರಸ್ತೆಯ ಶ್ರೀ ಶಾರದಾಂಬಾ ಎಜ್ಯುಕೇಶನ್ ಟ್ರಸ್ಟ್ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಜಿಲ್ಲಾ ಮಟ್ಟದ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ–2023–24 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಸಂಸದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ, ಭೀಮನಗೌಡ(ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ, ಸೇರಿದಂತೆ ಜಿಲ್ಲೆಯ ವಿವಿಧ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

# ಡಿ.22ರಂದು ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಫೋನ್ ಇನ್ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**

ವಿಜಯಪುರ: ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗಾಗಿ ಇಂಗ್ಲೀಷ್ ವಿಷಯದ ಕುರಿತು ಡಿ22 ರಂದು ಸಂಜೆ 6 ರಿಂದ 8 ಗಂಟೆವರೆಗೆ ಫೋನ್ ಇನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಡಿಡಿಪಿಐ ಎನ್.ಎಚ್.ನಾಗೂರ ಅವರು ತಿಳಿಸಿದ್ದಾರೆ.

ಮಾರ್ಚ್‌ನಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಇಂಗ್ಲೀಷ್ ವಿಷಯದಲ್ಲಿನ ಕಲಿಕೆ ಸಮಸ್ಯೆಗಳಿಗೆ ಮತ್ತು ಮಕ್ಕಳ ಪಾಲಕರು ಹಾಗೂ ಸಾರ್ವಜನಿಕರು ಪರೀಕ್ಷೆ ವಿಧಾನ ಹಾಗೂ ಇಂಗ್ಲೀಷ್ ವಿಷಯದ ಕುರಿತು ಇರುವ ತಮ್ಮ ಸಮಸ್ಯೆಗಳಿಗೆ ಫೋನ್ ಇನ್ ಕಾರ್ಯಕ್ರಮದಲ್ಲಿ ಕರೆ ಮಾಡಿ ಪರಿಹರಿಸಿಕೊಳ್ಳುವಂತೆ ಮನವಿ ಮಾಡಿಕೊಳ್ಳಲಾಗಿದೆ.

ಕರೆ ಮಾಡಲು ಸಂಪರ್ಕಿಸಬೇಕಾದ ಸಂಖ್ಯೆ : 7676313800, 9902569410, 9844652728, 9902833792, 9632710284, 9886926170, 9900488149, 9449968132, 9880472302, 9845919703 ಸಂಖ್ಯೆಗೆ ಕರೆ ಮಾಡಬಹುದಾಗಿದೆ.

ಪ್ರತಿ ವಿಷಯಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ದೂರವಾಣಿ ನಂಬರಗಳನ್ನು ನೀಡಲಾಗುವುದು. ಎಲ್ಲಾ ವಿಷಯಗಳ ಕುರಿತು ಕರೆ ಮಾಡಲು ಜಿಲ್ಲೆಯ ಎಲ್ಲಾ ಸರಕಾರಿ ಅನುದಾನಿತ ಮತ್ತು ಅನುದಾನರಹಿತ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ ಹಾಗೂ ಸಹ ಶಿಕ್ಷಕರ ಕಡೆಗೆ ಫೋನ್ ನಂಬರ್‌ಗಳು ಲಭ್ಯವಿರಲಿದ್ದು, ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಈ ಫೋನ್ ಇನ್ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.29 ರಂದು ವಿಶ್ವಮಾನವ, ಜ1ರಂದು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾಡಳಿತದ ವತಿಯಿಂದ ಕುವೆಂಪು ಜನ್ಮದಿನದ ಅಂಗವಾಗಿ ಡಿ.29 ರಂದು ವಿಶ್ವಮಾನವ ದಿನಾಚರಣೆ ಹಾಗೂ ಜನವರಿ 1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ ಕಾರ್ಯಕ್ರಮ ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಒಂದನೇ ಮಹಡಿಯ ಸಭಾಂಗಣದಲ್ಲಿ ಚುನಾವಣಾ ತಹಶೀಲ್ದಾರ್ ಪ್ರೇಮಸಿಂಗ್ ಪವಾರ ಅವರ ಅದ್ಯಕ್ಷತೆಯಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಡಿ.29ರಂದು ಕುವೆಂಪು ಜನ್ಮ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶ್ವಮಾನವ ದಿನಾಚರಣೆ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು. ಅದರಂತೆ ಜನವರಿ 1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ ನಿಮಿತ್ಯ ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಭಾವಚಿತ್ರ ಮೆರವಣಿಗೆ ಚಾಲನೆ, ನಂತರ ನಗರದ ಕಂದಗಲ್ ಶ್ರೀ ಹನಮಂತರಾಯ ರಂಗಮಂದಿರದಲ್ಲಿ ಬೆಳಿಗ್ಗೆ 10:30 ಗಂಟೆಗೆ ಜಯಂತಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಕಾರ್ಯಕ್ರಮದ ವೇದಿಕೆ ಅಲಂಕಾರ, ಸ್ವಚ್ಛತೆ, ಆಸನದ ವ್ಯವಸ್ಥೆ, ಕಾರ್ಯಕ್ರಮದಲ್ಲಿ ಉಪನ್ಯಾಸ, ಭಕ್ತಿ ಸಂಗೀತ ಹಾಗೂ ನಾಡಗೀತೆ ಕಾರ್ಯಕ್ರಮ ಆಯೋಜಿಸಲು ಸಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕಾರ್ಯಕ್ರಮ ಅಚ್ಚು ಕಟ್ಟಾಗಿ ಆಯೋಜಿಸಲು ಸಮಾಜದ ಮುಖಂಡರು ಸಾರ್ವಜನಿಕರು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ನೋಡಿಕೊಂಡು ಎರಡೂ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಯೋಜನೆಗೆ ನಿರ್ಧರಿಸಲಾಯಿತು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ.ನಾಗರಾಜ, ಶ್ರೀಕಾಂತ ಕುಂದನಗಾನ, ಪ್ರದೀಪ ಗಿರಗಾಂವಕರ, ಮಹೇಂದ್ರ ಸ್ವಾಮೀಜಿ ಮೂರುಝಾವರಮಠ, ಪ್ರಕಾಶ ಪತ್ತಾರ, ಪ್ರಕಾಶ ಬಡಿಗೇರ, ಕೆ. ಸುನಂದ, ಎಮ್. ಕೆ. ಪತ್ತಾರ, ದೇವೇಂದ್ರ ಮಿರೇಕರ, ವಿದ್ಯಾವತಿ ಅಂಕಲಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮಾಸಿಕ ವ್ಯಾಸಂಗ ವೇತನ-ಫೆಲೋಶಿಪ್‌ಗಾಗಿ ಅರ್ಜಿ ಕರೆ

ಉದಯರಶ್ಮಿ ನ್ಯೂಸ್

ವಿಜಯಪುರ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರಸಕ್ತ 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್‌ಡಿ ಅಧ್ಯಯನ ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ-ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪೂರ್ಣಾವಧಿ ಪಿಎಚ್‌ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಮಾಸಿಕ 10 ಸಾವಿರ ರೂ. ಗರಿಷ್ಠ 3 ವರ್ಷಗಳ ಅವಧಿಗೆ ವ್ಯಾಸಂಗ ವೇತನ-ಫೆಲೋಶಿಪ್‌ನ್ನು ಪ್ರವರ್ಗವಾರು ಮೀಸಲಾತಿ, ಮೆರಿಟ್ ಹಾಗೂ ಅನುದಾನ ಲಭ್ಯತೆಗೆ ಅನುಗುಣವಾಗಿ ಹಾಗೂ ನಿಯಮಾನುಸಾರ ಅರ್ಹ ಅಭ್ಯರ್ಥಿಗಳಿಗೆ ನೀಡಲಾಗುವುದು.

ಈ ಯೋಜನೆಯಡಿ ಸೌಲಭ್ಯ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳು ಆಫ್‌ಲೈನ್ (2 ಭಾವಚಿತ್ರ ಒಳಗೊಂಡ)ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳು, ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ, ಪಿಎಚ್‌ಡಿ ಅಧ್ಯಯನಕ್ಕಾಗಿ ನೊಂದಣಿ ಮಾಡಿರುವ ಬಗ್ಗೆ ವಿಶ್ವವಿದ್ಯಾಲಯ-ಅಧಿಕೃತ ಸಂಸ್ಥೆಯಿಂದ ಪ್ರಮಾಣ ಪತ್ರ, ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ಶಿಕ್ಷಣ ಸಂಸ್ಥೆ, ಕಾಲೇಜ್ ಅಥವಾ ವಿಶ್ವವಿದ್ಯಾಲಯ ಅಧಿಕೃತ ಸಂಸ್ಥೆಯಿಂದ ನಿಗದಿತ ನಮೂನೆಯಲ್ಲಿ (ನಿಗದಿತ ನಮೂನೆ ಇಲಾಖೆ ವೆಬ್‌ಸೈಟ್‌ದಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು) ದೃಢೀಕರಣ ಪತ್ರ, ಬ್ಯಾಂಕ್ ಖಾತೆ ವಿವರ, ಆಧಾರ ಕಾರ್ಡ್ ಪ್ರತಿ, ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್‌ಡಿ ಅಧ್ಯಯನಕ್ಕೆ ದಾಖಲಾಗಿರುವ ಶುಲ್ಕದ ರಸೀದಿ, ವಿಶೇಷ ಚೇತನ ಅಭ್ಯರ್ಥಿಯಾಗಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ, ಪಾಸ್‌ಪೋರ್ಟ ಅಳತೆಯ 2 ಭಾವಚಿತ್ರ, ಮುಚ್ಚಳಿಕೆ ಪ್ರಮಾಣ ಪತ್ರದೊಂದಿಗೆ ದಿನಾಂಕ : 10-01-2024ರೊಳಗೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿ ವಿಜಯಪುರ ವಿಳಾಸಕ್ಕೆ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 8050770004 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೃಕ್ಷೊಥಾನ್ ಹೆರಿಟೇಜ್ ರನ್ ಯಶಸ್ಸಿಗೆ ಭರದ ಸಿದ್ಧತೆ

ಉದಯರಶ್ಮಿ ನ್ಯೂಸ್

ವಿಜಯಪುರ: ಗುಮ್ಮಟ ನಗರಿಯಲ್ಲಿ ಡಿಸೆಂಬರ್ 24 ರಂದು ರವಿವಾರ ನಡೆಯಲಿರುವ ವೃಕ್ಷೊಥಾನ್ ಹೆರಿಟೇಜ್ ರನ್-2023ಕ್ಕೆ ಎರಡೇ ದಿನ ಬಾಕಿ ಉಳಿದಿದ್ದು, ಕಾರ್ಯಕ್ರಮದ ಯಶಸ್ಸಿಗೆ ಸಿದ್ಧತೆಗಳು ಭರದಿಂದ ಸಾಗಿವೆ. ಈಗಾಗಲೇ ಪ್ರಶಸ್ತಿ ಮೊತ್ತ, ಮಾರ್ಗ, ಪದಕಗಳನ್ನು ಅಂತಿಮಗೊಳಿಸಲಾಗಿದ್ದು, ಶನಿವಾರ ಬಿಬ್ ಮತ್ತು ಟಿ-ಶರ್ಟ್ ವಿತರಿಸಲಾಗುವುದು.

ಈ ಬಾರಿ ಒಟ್ಟು ರೂ. 10 ಲಕ್ಷ ಬಹುಮಾನ ನಿಗದಿ ಪಡಿಸಲಾಗಿದ್ದು, ನಾಲ್ಕು ಕೆಟೆಗರಿಯಲ್ಲಿ ಒಟ್ಟು ತಲಾ 38 ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ ಎಂದು ವೃಕ್ಷೊಥಾನ್ ಹೆರಿಟೇಜ್ ರನ್-2023 ಕೋರ್ ಕಮಿಟಿ ಪದಕ, ರೂಟ್, ನೋಂದಣಿ ಸಮಿತಿಯ ರಘು ಸಾಲೋಟಗಿ, ಸಂಕೇತ ಬಗಲಿ, ಸೋಮಶೇಖರ ಸ್ವಾಮಿ, ವೀರೇಂದ್ರ ಗುಚ್ಚೆಟ್ಟಿ, ಡಾ. ರಾಜು ಯಲಗೊಂಡ ಹಾಗೂ ಸಂತೋಷ ಔರಸಂಗ ತಿಳಿಸಿದ್ದಾರೆ

ನಾನಾ ವಿಭಾಗಗಳಲ್ಲಿ ಪುರುಷ ಮತ್ತು ಮಹಿಳಾ ಓಟಗಾರರಿಗೆ ನಿಗದಿ ಪಡಿಸಲಾಗಿರುವ ಕೆಟಗರಿ, ವಿಭಾಗಗಳು ಮತ್ತು ನಿಗದಿ ಪಡಿಸಲಾಗಿರುವ ಬಹುಮಾದ ಮೊತ್ತ ಇಲ್ಲಿದೆ.

21 ಕಿ. ಮೀ. ಪುರುಷರು ಮತ್ತು ಮಹಿಳೆಯರ ವಯೋಮಾನ ವಿಭಾಗ ಮತ್ತು ಪ್ರಶಸ್ತಿ ಮೊತ್ತ

18 ರಿಂದ 34 ವರ್ಷ: ಪ್ರಥಮ ಬಹುಮಾನ ರೂ. 30 ಸಾವಿರ, ದ್ವಿತೀಯ ಬಹುಮಾನ ರೂ. 25 ಸಾವಿರ, ತೃತೀಯ ಬಹುಮಾನ ರೂ. 20 ಸಾವಿರ.

35 ರಿಂದ 44 ವರ್ಷ: ಪ್ರಥಮ ಬಹುಮಾನ ರೂ. 20 ಸಾವಿರ, ದ್ವಿತೀಯ ಬಹುಮಾನ ರೂ. 15 ಸಾವಿರ, ತೃತೀಯ ಬಹುಮಾನ ರೂ. 12 ಸಾವಿರ.

45 ರಿಂದ 59 ವರ್ಷ: ಪ್ರಥ-ಮ ಬಹುಮಾನ ರೂ. 15 ಸಾವಿರ, ದ್ವಿತೀಯ ಬಹುಮಾನ ರೂ. 12 ಸಾವಿರ, ತೃತೀಯ ಬಹುಮಾನ ರೂ. 10 ಸಾವಿರ.




60 ವರ್ಷ ಮೇಲ್ಪಟ್ಟು: ಪ್ರಥ-ಮ ಬಹುಮಾನ ರೂ. 10 ಸಾವಿರ, ದ್ವಿತೀಯ ಬಹುಮಾನ ರೂ. 8 ಸಾವಿರ ತೃತೀಯ ಬಹುವಾನ ರೂ. 6 ಸಾವಿರ.

10 ಕಿ. ಮೀ. ಪುರುಷರು ಮತ್ತು ಮಹಿಳೆಯರ ವಯೋಮಾನ ವಿಭಾಗ ಮತ್ತು ಪ್ರಶಸ್ತಿ ಮೊತ್ತ

18 ರಿಂದ 34 ವರ್ಷ: ಪ್ರಥಮ ಬಹುಮಾನ ರೂ. 20 ಸಾವಿರ, ದ್ವಿತೀಯ ಬಹುಮಾನ ರೂ. 15 ಸಾವಿರ, ತೃತೀಯ ಬಹುಮಾನ ರೂ. 12 ಸಾವಿರ.

35 ರಿಂದ 44 ವರ್ಷ: ಪ್ರಥ-ಮ ಬಹುಮಾನ ರೂ. 18 ಸಾವಿರ, ದ್ವಿತೀಯ ಬಹುಮಾನ ರೂ. 13 ಸಾವಿರ, ತೃತೀಯ ಬಹುಮಾನ ರೂ. 10 ಸಾವಿರ.

45 ರಿಂದ 59 ವರ್ಷ: ಪ್ರಥ-ಮ ಬಹುಮಾನ ರೂ. 15 ಸಾವಿರ, ದ್ವಿತೀಯ ಬಹುಮಾನ ರೂ. 12 ಸಾವಿರ, ತೃತೀಯ ಬಹುಮಾನ ರೂ. 8 ಸಾವಿರ.

60 ವರ್ಷ ಮೇಲ್ಪಟ್ಟು: ಪ್ರಥ-ಮ ಬಹುಮಾನ ರೂ. 10 ಸಾವಿರ, ದ್ವಿತೀಯ ಬಹುಮಾನ ರೂ. 8 ಸಾವಿರ ತೃತೀಯ ಬಹುಮಾನ ರೂ. 5 ಸಾವಿರ.

5 ಕಿ. ಮೀ. ಪುರುಷರು ಮತ್ತು ಮಹಿಳೆಯರ ವಯೋಮಾನ ವಿಭಾಗ ಮತ್ತು ಪ್ರಶಸ್ತಿ ಮೊತ್ತ

12 ರಿಂದ 17 ವರ್ಷ: ಪ್ರಥಮ ಬಹುಮಾನ ರೂ. 10 ಸಾವಿರ, ದ್ವಿತೀಯ ಬಹುಮಾನ ರೂ. 8 ಸಾವಿರ, ತೃತೀಯ ಬಹುಮಾನ ರೂ. 5 ಸಾವಿರ.

18 ರಿಂದ 34 ವರ್ಷ: ಪ್ರಥ-ಮ ಬಹುಮಾನ ರೂ. 8 ಸಾವಿರ, ದ್ವಿತೀಯ ಬಹುಮಾನ ರೂ. 5 ಸಾವಿರ, ತೃತೀಯ ಬಹುಮಾನ ರೂ. 3 ಸಾವಿರ.

35 ರಿಂದ 44 ವರ್ಷ: ಪ್ರಥ-ಮ ಬಹುಮಾನ ರೂ. 8 ಸಾವಿರ, ದ್ವಿತೀಯ ಬಹುಮಾನ ರೂ. 5 ಸಾವಿರ, ತೃತೀಯ ಬಹುಮಾನ ರೂ. 3 ಸಾವಿರ.

45 ರಿಂದ 59 ವರ್ಷ: ಪ್ರಥ-ಮ ಬಹುಮಾನ ರೂ. 5 ಸಾವಿರ, ದ್ವಿತೀಯ ಬಹುಮಾನ ರೂ. 3500, ತೃತೀಯ ಬಹುಮಾನ ರೂ. 2500.

60 ವರ್ಷ ಮೇಲ್ಪಟ್ಟು: ಪ್ರಥ-ಮ ಬಹುಮಾನ ರೂ. 5 ಸಾವಿರ, ದ್ವಿತೀಯ ಬಹುಮಾನ ರೂ. 3500 ತೃತೀಯ ಬಹುಮಾನ ರೂ. 2500.

3.5 ಕಿ. ಮೀ. ಪುರುಷರು ಮತ್ತು ಮಹಿಳೆಯರ ವಯೋಮಾನ ವಿಭಾಗ ಮತ್ತು ಪ್ರಶಸ್ತಿ ಮೊತ್ತ

12 ರಿಂದ 16 ವರ್ಷ: ಪ್ರಥ-ಮ ಬಹುಮಾನ ರೂ. 8 ಸಾವಿರ, ದ್ವಿತೀಯ ಬಹುಮಾನ ರೂ. 6 ಸಾವಿರ, ತೃತೀಯ ಬಹುಮಾನ ರೂ. 4 ಸಾವಿರ.

17 ರಿಂದ 25 ವರ್ಷ: ಪ್ರಥ-ಮ ಬಹುಮಾನ ರೂ. 6 ಸಾವಿರ, ದ್ವಿತೀಯ ಬಹುಮಾನ ರೂ. 4 ಸಾವಿರ, ತೃತೀಯ ಬಹುಮಾನ ರೂ. 3 ಸಾವಿರ.

26 ರಿಂದ 35 ವರ್ಷ: ಪ್ರಥ-ಮ ಬಹುಮಾನ ರೂ. 5 ಸಾವಿರ, ದ್ವಿತೀಯ ಬಹುಮಾನ ರೂ. 3 ಸಾವಿರ, ತೃತೀಯ ಬಹುಮಾನ ರೂ. 2 ಸಾವಿರ.

36 ರಿಂದ 45 ವರ್ಷ: ಪ್ರಥ-ಮ ಬಹುಮಾನ ರೂ. 3 ಸಾವಿರ, ದ್ವಿತೀಯ ಬಹುಮಾನ ರೂ. 2000, ತೃತೀಯ ಬಹುಮಾನ ರೂ. 1000.

46 ವರ್ಷ ಮೇಲ್ಪಟ್ಟು: ಪ್ರಥ-ಮ ಬಹುಮಾನ ರೂ. 3 ಸಾವಿರ, ದ್ವಿತೀಯ ಬಹುಮಾನ ರೂ. 2 ಸಾವಿರ, ತೃತೀಯ ಬಹುಮಾನ ರೂ. 1 ಸಾವಿರ.

800 ಮೀ. ಹ್ಯಾಪಿ ರನ್(12 ವರ್ಷದೊಳಗಿನ ಮಕ್ಕಳು ಮತ್ತು ಹಿರಿಯ ನಾಗರಿಕರಿಗಾಗಿ).

ಟಿ-ಶರ್ಟ್ ಮತ್ತು ಬಿಬ್ ವಿತರಣೆ ಮಾಹಿತಿ

ವಿಜಯಪುರ ಹೆರಿಟೇಜ್ ಮ್ಯಾರಾಥಾನ್ ರನ್- 2023ರಲ್ಲಿ ಭಾಗವಹಿಸಲು ನೋಂದಣಿ ಮಾಡಿಸಿಕೊಂಡಿರುವ ಸುಮಾರು 8200ಕ್ಕೂ ಹೆಚ್ಚು ಓಟಗಾರರಿಗೆ ಬಿಬ್ಸ್ ಅಂದರೆ ಓಟಗಾರರ ನೋಂದಣಿ ಸಂಖ್ಯೆ ಹೊಂದಿರುವ ನಂಬರ್ ಪಟ್ಟಿಯನ್ನು ನೀಡಲಾಗುವುದು. ಡಿಸೆಂಬರ್ 23 ರಂದು ಶನಿವಾರ ಬೆಳಿಗ್ಗೆ 11 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಬಿಬ್ಸ್ ಮತ್ತು ಟಿ-ಶರ್ಟ್ಸ್ ನೀಡಲಾಗುವುದು. ನಂತರ ಬಂದವರಿಗೆ ಅವಕಾಶ ಇರುವುದಿಲ್ಲ ಎಂದು ಬಿಬ್ಸ್ ಸಮಿತಿಯ ಅಪ್ಪು ಭೈರಗೊಂಡ ತಿಳಿಸಿದ್ದಾರೆ.

ಒಟ್ಟಾರೆ ಈ ಬಾರಿಯೂ ಕೂಡ ವೃಕ್ಷೊಥಾನ್ ಹೆರಿಟೇಜ್ ರನ್- 2023 ಯನ್ನು ಯಶಸ್ವಿಯಾಗಿ ನಡೆಸುವ ಮೂಲಕ ಓಡು ವಿಜಯಪುರ ಓಡು(ರನ್ ವಿಜಯಪುರ ರನ್) ಬ್ರ್ಯಾಂಡ್ ಕ್ರಿಯೇಟ್ ಮಾಡುವ ಗುರಿಯನ್ನು ವಕ್ಷೊಥಾನ್ ಹೆರಿಟೇಜ್ ರನ್-2023 ಕೋರ್ ಕಮಿಟಿ ಮತ್ತು ಇತರ ಉಪಸಮಿತಿಗಳ ಸರ್ವ ಸದಸ್ಯರು ಹಗಲಿರುಳು ಶ್ರಮ ವಹಿಸುತ್ತಿದ್ದಾರೆ. ಅಲ್ಲದೇ, ಈ ಮೂಲಕ ಪರಿಸರ ಮತ್ತು ಪ್ರಾಚೀನ ಸ್ಮಾರಕಗಳ ಸಂರಕ್ಷಣೆ ಮತ್ತು ಜಾಗೃತಿ ಹಾಗೂ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಮತ್ತು ಶತಮಾನದ ಸಂತ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಗೌರವಾರ್ಥ ಆಯೋಜಿಸಲಾಗಿರುವ ಈ ಕಾರ್ಯಕ್ರಮಕ್ಕೆ ಅದರದೇ ಆದ ಮೆರಗು ನೀಡಲಾಗುತ್ತಿದೆ.

# ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಉದಯರಶ್ಮಿ ನ್ಯೂಸ್

ವಿಜಯಪುರ: ಅಲ್ಪಸಂಖ್ಯಾತ ಸಮುದಾಯದ 1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ : 31-12-2023 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಮೆಟ್ರಿಕ್ ಪೂರ್ವ ಆನ್‌ಲೈನ್ ವೆಬ್‌ಸೈಟ್ https://ssp.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https:dom.karnataka.gov.in ನಲ್ಲಿ ಹಾಗೂ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಪಡೆಯಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.28ರಂದು ಡಾ.ಅಂಬೇಡ್ಕರ್ ಸಾಧನೆಗಳ ಪರಿಚಯ

ಉದಯರಶ್ಮಿ ನ್ಯೂಸ್

ವಿಜಯಪುರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಬದುಕು ಮತ್ತು ಸಾಧನೆಗಳ ಪರಿಚಯ ಕುರಿತು ಅಂಬೇಡ್ಕರ್ ಓದು ಕಾರ್ಯಕ್ರಮ ನಗರದ ವಿ.ಬಿ.ದರಬಾರ್ ಸಂಯುಕ್ತ ಪದವಿ ಪೂರ್ವ ಕಾಲೇಜ್‌ನಲ್ಲಿ ಡಿ.28 ರಂದು ಹಮ್ಮಿಕೊಳ್ಳಲಾಗಿದೆ.

ವಿದ್ಯಾರ್ಥಿ-ವಿದ್ಯಾರ್ಥಿಗಳಿಂದ ಪ್ರಬಂಧ ಸ್ಪರ್ಧೆ ವಿಜೇತರಿಗೆ ಪುಸ್ತಕ ರೂಪದಲ್ಲಿ ಬಹುಮಾನ ವಿತರಣೆ ಕಾರ್ಯಕ್ರಮ ಅಂದು ಬೆಳಿಗ್ಗೆ 11-30ಕ್ಕೆ ಜರುಗಲಿದ್ದು, ಕಾರ್ಯಕ್ರಮವನ್ನು ವಿದ್ಯಾವರ್ಧಕ ಸಂಘದ ಸಂಯೋಜನಾಧಿಕಾರಿ ಡಾ.ವ್ಹಿ.ಬಿ.ಗ್ರಾಮಪುರೋಹಿತ ಉದ್ಘಾಟಿಸಲಿದ್ದಾರೆ. ವ್ಹಿ.ಬಿ.ದರಬಾರ ಸಂಯುಕ್ತ ಪದವಿಪೂರ್ವ ಕಾಲೇಜ್ ಪ್ರಾಚಾರ್ಯ ಟಿ.ಆರ್. ಕುಲಕರ್ಣಿ ಅಧ್ಯಕ್ಷತೆ ವಹಿಸಲಿದ್ದಾರೆ. ವಿಶೇಷ ಉಪನ್ಯಾಸಕರಾಗಿ ಕಾಲೇಜಿನ ಉಪನ್ಯಾಸಕ ಎ.ನಾಗರಾಜ್ ಅವರು ಭಾಗವಹಿಸಲಿದ್ದಾರೆ.

ಅಮೋಘಸಿದ್ದೇಶ್ವರ ಪುರಾಣ ಮಂಗಲ । ಕಾಂಗ್ರೆಸ್ ಮುಖಂಡ ರವಿರಾಜ ದೇವರಮನಿ ಅಭಿಮತ

# ಧಾರ್ಮಿಕ ಕಾರ್ಯಕ್ರಮಗಳಿಂದ ಮಾನಸಿಕ ನೆಮ್ಮದಿ ಸಾಧ್ಯ

ಉದಯರಶ್ಮಿ ನ್ಯೂಸ್



ಬ್ರಹ್ಮದೇವನಮಡು: ಸಮಾಜದಲ್ಲಿ ಪ್ರತಿಯೊಬ್ಬರೂ ಧಾಮಿ9ಕ ಕಾಯ9ಕ್ರಮಗಳಲ್ಲಿ ಪಾಲ್ಗೊಳ್ಳುವ ಮೂಲಕ ಮಾನಸಿಕ ನೆಮ್ಮದಿ ಕಂಡುಕೊಳ್ಳಬಹುದು ಎಂದು ಗೋಲಗೇರಿಯ ಕಾಂಗ್ರೆಸ್ ಮುಖಂಡ ರವಿರಾಜ ದೇವರಮನಿ ಹೇಳಿದರು.

ಸಿಂದಗಿ ತಾಲೂಕಿನ ಸುಕ್ಷೇತ್ರ ಯಂಕಂಚಿ ಕುಂಟೋಜಿ ಹಿರೇಮಠದಲ್ಲಿ 46ನೇ ವಷ9ದ ಲಿಂ.ಶ್ರೀ ರುದ್ದಮುನಿ ಶಿವಾಚಾಯ9ರ ಪುಣ್ಯಾರಾಧನೆ ಅಂಗವಾಗಿ ಮಂಗಳವಾರ ರಾತ್ರಿ ಹಮ್ಮಿಕೊಂಡಿದ್ದ ಅಮೋಘಸಿದ್ದೇಶ್ವರ ಪುರಾಣ ಮಹಾಮಂಗಲ ಕಾಯ9ಕ್ರಮದಲ್ಲಿ ಮಾತನಾಡಿದರು.

ವಿವಿಧ ಜಾತಿ, ಧಮ9, ಮತ, ಜನಾಂಗದ ಮಧ್ಯೆ ಭಾವೈಕ್ಯ ಹಾಗೂ ಸೌಹಾದ9 ಮೂಡಿಸಲು ಪುರಾಣ-ಪ್ರವಚನ ಕಾಯ9ಕ್ರಮಗಳು ಅವಶ್ಯ. ಕೃಷಿ ಪ್ರಧಾನವಾದ ನಾಡಿನಲ್ಲಿ ಸಂಪ್ರದಾಯ, ಧಮಾ9ಚರಣೆಗಳು, ಪುರಾಣ ಪ್ರವಚನ ಹಮ್ಮಿಕೊಳ್ಳುವ ಮೂಲಕ ಸಮಾಜದಲ್ಲಿ ಉತ್ತಮ ಧಾಮಿ9ಕ ಸಂಸ್ಕಾರ, ನೈತಿಕ ಮೌಲ್ಯಗಳು ಮನವರಿಕೆ ಮಾಡುವುದು ಅವಶ್ಯವಾಗಿದೆ ಎಂದರು.

ಕಡಕೋಳ ಮಡಿವಾಳೇಶ್ವರ ಮಹಾ ಮಠದ ಡಾ.ರುದ್ರಮುನಿ ಶಿವಾಚಾಯ9ರು, ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾಯ9ರು ಆಶೀವ9ಚನ ನೀಡಿ, ಮಠ ಮಂದಿರಗಳಲ್ಲಿ ಇಂತಹ ಆಧ್ಯಾತ್ಮಿಕ ಚಿಂತನೆ, ಮಹಾಪುರುಷರ ಜೀವನ ಚರಿತ್ರೆಯು ಪುರಾಣ ಪ್ರವಚನದಿಂದ ಆಧ್ಯಾತ್ಮಿಕ ಚಿಂತನೆ ಮೂಡುತ್ತದೆ ಎಂದರು.

ಶ್ರೀಮಠದ ಒಡೆಯ ಅಭಿನವ ರುದ್ರಮುನಿ ಶಿವಾಚಾಯ9ರು, ಕಮಸಗಿಯ ಕಲ್ಲಾಲಿಂಗ ಶ್ರೀಗಳು, ಮುಳವಾಡದ ಸಿದ್ಧಲಿಂಗ ಶಿವಾಚಾಯ9ರು, ಕನ್ನೊಳ್ಳಿ ಸಿದ್ದಲಿಂಗ ಶಿವಾಚಾಯ9ರು, ಅಜು9ಣಗಿಯ ಶ್ರೀಗಳು, ಗುಳೇದಗುಡ್ಡದ ರೇವಣಸಿದ್ದ ದೇವರು, ಉದ್ಯಮಿ ಶಂಕರಗೌಡ ಹೊಸಮನಿ, ಅಯ್ಯನಗೌಡ ಪಾಟೀಲ, ಸತೀಶ ಜವಳಗಿ, ಮೇಲಪ್ಪಗೌಡ ಪಾಟೀಲ, ಪತ್ರಕತ9 ಮಲ್ಲು ಕೆಂಭಾವಿ ವೇದಿಕೆ ಮೇಲೆ ಇದ್ದರು.

ಪ್ರವಚನಕಾರ ವೀರಭದ್ರಯ್ಯ ಶಾಸ್ತ್ರಿಗಳು ಪ್ರವಚನ ನೀಡಿದರು.

ಕಲ್ಲಯ್ಯ ಪಡದಳ್ಳಿ ಸಂಗೀತ ಸೇವೆಯೊಂದಿಗೆ ಪ್ರಾಣೇಶ ಯಡ್ರಾಮಿ ತಬಲ್ ಸಾತ್ ನೀಡಿದರು. ಶಿಕ್ಷಕ ಶಿವು ಹಡಗಲಿ ಪ್ರಾಥಿ9ಸಿದರು. ಶಿಕ್ಷಕ ಶ್ರೀಶೈಲ ಹದಗಲ್ಲ್ ಸ್ವಾಗತಿಸಿದರು. ಶಿಕ್ಷಕ ಚಂದ್ರಕಾಂತ ಬಿರಾದಾರ ನಿರೂಪಿಸಿ, ವಂದಿಸಿದರು.

ಈ ವೇಳೆ ಪತ್ರಕತ9 ಮಲ್ಲು ಕೆಂಭಾವಿ ಅವರನ್ನು ಶ್ರೀಮಠದಿಂದ ಕನ್ನೊಳ್ಳಿಯ ಸಿದ್ದಲಿಂಗ ಶಿವಾಚಾಯ9ರು ಆಶೀವ9ದಿಸಿದರು.

# ಸಂಗೀತ ಸಂಭ್ರಮ-2

## ಭಾವರಶ್ಮಿ

– ಅಡ್ಮಿನ್ ಬಳಗ
("ನಮ್ಮ ಕಥಾ ಅರಮನೆ" ಬರಹಗಾರರು)
ಉದಯರಶ್ಮಿ ದಿನಪತ್ರಿಕೆ

ಸಾಮಾಜಿಕ ಜಾಲತಾಣವನ್ನು ಬರೀ ವ್ಯರ್ಥ ಕಾಲಹರಣಕ್ಕೆ ಉಪಯೋಗಿಸಿಕೊಳ್ಳದೇ ಅದರಿಂದ ಒಂದಿಷ್ಟು ಉತ್ತಮ ವಿಚಾರಗಳನ್ನು ಕಲಿಯುವ, ಕಲಿಸುವ ಮೂಲಕ ಜನರಲ್ಲಿ ಅಡಗಿರುವ ಸುಪ್ತ ಕಲೆಗಳನ್ನು ಪ್ರಪಂಚಕ್ಕೆ ಪರಿಚಯಿಸುವ ಸಲುವಾಗಿ ವಿಜಯನಗರ ಜಿಲ್ಲೆ, ಹೂವಿನ ಹಡಗಲಿ ತಾಲ್ಲೂಕು, ಹೊಳಲು ಗ್ರಾಮದ ಶ್ರೀ ಗುಡ್ಡಾ ಭಟ್ಟ ಜೋಷಿ ಅವರು ಹಲವು ಅರಮನೆ ಗಳನ್ನು ಸಂಸ್ಥಾಪಿಸಿದರು.

ತೆರೆ ಮರೆಯ ಅದೆಷ್ಟೊ ಪ್ರತಿಭೆಗಳನ್ನು ಬೆಳಕಿಗೆ ತರುವ ಅವರ ಈ ಕಾರ್ಯ ಮೆಚ್ಚಲೇ ಬೇಕು. ಗುಡ್ಡಣ್ಣನವರ ಕನಸಿನ ಕೂಸುಗಳನ್ನು ಅವರ ಮಾರ್ಗದರ್ಶನದ ಮೇರೆಗೆ ಅಷ್ಟೇ ಸಮರ್ಥವಾಗಿ ಮುನ್ನಡೆಸಿಕೊಂಡು ಹೋಗಲು ಪ್ರತೀ ಅರಮನೆ ನಲ್ಲೂ ಅಷ್ಟೇ ಬಲಿಷ್ಠ ನಿರ್ವಾಹಕ ಬಳಗವಿದೆ.

ಅಡುಗೆ, ಸಂಗೀತ, ಸಾಹಿತ್ಯ, ನೃತ್ಯ, ರಂಗೋಲಿ, ಹಾಸ್ಯ ಕೈ ತೋಟ ಇನ್ನೂ ಹಲವಾರು ಕಲೆಗಳಿಗೆ ಅದರದ್ದೇ ಆದ ಪ್ರತ್ಯೇಕ ಗ್ರೂಪ್ ಗಳನ್ನು ನಿರ್ಮಿಸಿ ಅದೆಷ್ಟೋ ಜನರಿಗೆ ತಮ್ಮ ಪ್ರತಿಭೆ ಜಗತ್ತಿಗೆ ತೋರಲು ವೇದಿಕೆ ರೂಪಿಸಿಕೊಟ್ಟ ಕೀರ್ತಿ ನಮ್ಮ ಗುಡ್ಡಣ್ಣನವರದ್ದು. ಒಟ್ಟು 25 ಅರಮನೆಗಳಿದ್ದು ಈ ಎಲ್ಲಾ ಅರಮನೆಗಳಲ್ಲಿ ಅಗ್ರಮಾನ್ಯ ಸ್ಥಾನ ಪಡೆದವುಗಳಲ್ಲಿ ನಮ್ಮ ಸಂಗೀತದ ಅರಮನೆಯೂ ಒಂದು.

ಜನವರಿ 14, 2020 ರಂದು ಶುರುವಾದ ಈ ಗ್ರೂಪ್ ನಲ್ಲಿ 15 ಸಾವಿರದಷ್ಟು ಸದಸ್ಯರಿದ್ದಾರೆ. ಸಂಗೀತಕ್ಕೆ ಒಲಿಯದ ಮನಸೇ ಇಲ್ಲ. ಅಂತಹ ಸುಮಾನಮನಸ್ಕರಿಗಾಗಿ ನಮ್ಮ ಸಂಗೀತದ ಅರಮನೆಯ ಬಾಗಿಲು ಸದಾ ತೆರೆದಿರುತ್ತದೆ.

ಮನೆಯಲ್ಲಿಯೇ ಕುಳಿತು ಮನಸ್ಸಂತೋಷಕ್ಕಾಗಿ ತಮ್ಮಿಷ್ಟದ ಹಾಡುಗಳನ್ನು ಕಲಿತು ಹಾಡಿ ವೀಡಿಯೋ ಮಾಡಿ ಗ್ರೂಪ್ ನಲ್ಲಿ ಪೋಸ್ಟ್ ಮಾಡಿ ಹಲವರಿಂದ ಪ್ರಶಂಸೆ ಪಡೆದು ಮತ್ತಷ್ಟು ಹಾಡುಗಳನ್ನು ರಾಗಬದ್ಧವಾಗಿ ಕಲಿತು ಹಾಡುವ ಹುರುಪು ನೀಡುವ ಸ್ಥಳ ನಮ್ಮ ಸಂಗೀತದ ಅರಮನೆ.

ಸಂದರ್ಭಕ್ಕೆ ತಕ್ಕಂತೆ ಹೊಸ ಹೊಸ ಕಾರ್ಯಕ್ರಮಗಳನ್ನು ಆಯೋಜಿಸುವುದಲ್ಲದೆ ಪ್ರತೀ ವಾರ ಕ್ರಿಯಾಶೀಲ ವಿಷಯಗಳ ಥೀಮ್ ನೀಡಿ ಸದಸ್ಯರನ್ನು ಹಾಡುವಂತೆ ಉತ್ತೇಜಿಸಿ ವಿಜೇತರನ್ನು ಆಯ್ಕೆ ಮಾಡಿ ಪ್ರಮಾಣ ಪತ್ರಗಳನ್ನು ನೀಡುತ್ತಾ ಬಂದ ಅಡ್ಮಿನ್ ಬಳಗದ ಕಾರ್ಯವೂ ಕೂಡ ಅಷ್ಟೇ ಶ್ಲಾಘನೀಯ. 2022 ಮೇ 29 ರಂದು ಈ ಗುಂಪಿನ ಮೊದಲ ಸಂಗೀತ ಸಂಭ್ರಮವನ್ನು




ಅದ್ದೂರಿಯಾಗಿ ಆಚರಿಸಲಾಯಿತು. ಸುಮಾರು ಮುನ್ನೂರಕ್ಕೂ ಅಧಿಕ ಸದಸ್ಯರು ನೆರೆದಿದ್ದು ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು.

ಈ ಬಾರಿ ನಮ್ಮ ಸಂಗೀತದ ಅರಮನೆಯ ಎರಡನೆಯ ಸಂಗೀತ ಸಂಭ್ರಮ ಕಾರ್ಯಕ್ರಮವನ್ನು ಇದೇ ಬರುವ 24 ಡಿಸೆಂಬರ್ 2023 ರಂದು ಬೆಂಗಳೂರಿನ ಬಸವೇಶ್ವರ ನಗರದಲ್ಲಿರುವ ಶ್ರೀ ಹುತ್ತದ ಗಣಪತಿ ದೇವಸ್ಥಾನ ದಲ್ಲಿ ಆಯೋಜಿಸಲಾಗಿದ್ದು ಕಾರ್ಯಕ್ರಮಕ್ಕೆ ತಮ್ಮೆಲ್ಲರಿಗೂ ಆದರದ ಆಮಂತ್ರಣ. ತಪ್ಪದೇ ಬನ್ನಿ, ಕಾರ್ಯಕ್ರಮದ ಭಾಗವಾಗಿ.

## ಕಾವ್ಯರಶ್ಮಿ

– ವರಲಕ್ಷ್ಮೀ ಪರ್ತಜೆ
("ನಮ್ಮ ಕಥಾ ಅರಮನೆ" ಬರಹಗಾರರು)



### ಹೆಣ್ಣೆಂದರೆ

ಹೆತ್ತವರ ಒಲವಿನ ಕುಡಿಯವಳು
ಪತಿಯಮುದ್ದಿನ ಮಡದಿಯವಳು

ಎರಡುಮನೆಗಳ ನಂದಾದೀಪವಾಗಿ
ಮುದ್ದು ಕಂದಮ್ಮಗಳ ಮಾತೆಯಾಗಿ
ಸುಖದುಃಖಗಳಲಿ ಸದಾ ಸಮಚಿತ್ತಳು
ಸಹನೆಯಲಿ ಭೂಮಿಯಂತೆ ಇಹಳು
ಸಭ್ಯ ಸಂಸ್ಕೃತಿಯ ಪ್ರತೀಕವಿವಳು
ಎಲ್ಲೆಡೆ ಛಾಪನ್ನು ಮೂಡಿಸುವವಳು
ಪ್ರೀತಿ ತ್ಯಾಗ ಸ್ನೇಹಕ್ಕೆ ಸಮಾನಳಿವಳು
ನವ ಸಮಾಜದ ನಿರ್ಮಾತೃ ಇವಳು

ಪ್ರಕೃತಿದೇವಿಯ ತದ್ರೂಪವೇ ಇವಳು
ಹೆಣ್ಣೆಂದರೆ ಆದಿಶಕ್ತಿಯ ಸ್ವರೂಪಳು..

